# ಸಕ್ಕರೆ ನಾಡು

ಬೆಳಗಿನ ಕನ್ನಡ ದಿನಪತ್ರಿಕೆ

**Sakkare Naadu** Kannada Daily Morning Newspaper

email : sakkarenadus@gmail.com

Editor : Chandrashekara Swamy.M

Posted at H.P.O.Mandya : KA/SK/MND/1022/2024-2026

RNI No: KARKAN/2019/78456 Volume : 05 Issue : 266 October- 15-2025 Wednesday Page - 04 Rs-2.00


**ಹಿತ ನುಡಿ**

ಇತಿಹಾಸವನ್ನು ಯಾರು ಮರೆತಿದ್ದಾರೋ ಅಂಥವರು ಇತಿಹಾಸವನ್ನು ಸೃಷ್ಟಿಸಲಾಗದು.

|ಡಾ. ಬಿ ಆರ್ ಅಂಬೇಡ್ಕರ್

# ನಾನು ಗುಂಪುಗಾರಿಕೆಯಲ್ಲಿ ನಂಬಿಕೆ ಇಟ್ಟವನಲ್ಲ; ಡಿ.ಕೆ ಶಿವಕುಮಾರ್

ಬೆಂಗಳೂರು: ಕಾಂಗ್ರೆಸ್ ಪಕ್ಷದಲ್ಲಿ ಮುಖ್ಯಮಂತ್ರಿ ಸ್ಥಾನದ ವಿಚಾರ ಸಂಖ್ಯಾಬಲದಿಂದ ನಿರ್ಧಾರವಾಗುವುದಿಲ್ಲ, ಎಲ್ಲವನ್ನೂ ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಮುಖ್ಯಮಂತ್ರಿ ಆಯ್ಕೆಯಲ್ಲಿ ಯಾರ ತೀರ್ಮಾನ ನಿರ್ಣಾಯಕ ಎಂಬ ವಿಷಯದ ಕುರಿತು ಸಿದ್ದರಾಮಯ್ಯ ಹೇಳಿಕೆಗೆ ಡಿ.ಕೆ.ಶಿವಕುಮಾರ್ ಕೌಂಟರ್ ನೀಡಿದ್ದಾರೆ. ಮುಖ್ಯಮಂತ್ರಿಯಾಗಲು ಶಾಸಕರ ಬಲ ಮುಖ್ಯವಲ್ಲ. ಎಲ್ಲ ನಿರ್ಧಾರಗಳನ್ನು ಹೈಕಮಾಂಡ್ ಮಾಡುತ್ತದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಂದು ಅಭಿಪ್ರಾಯಪಟ್ಟಿದ್ದಾರೆ.

ಸುದ್ದಿವಾಹಿನಿಗೆ ಇತ್ತೀಚೆಗೆ ಸಂದರ್ಶನ ನೀಡಿದ್ದ ಶಿವಕುಮಾರ್, ಶಾಸಕರ ಬಲಾಬಲದ ಮೇಲೆ ಮುಖ್ಯಮಂತ್ರಿ ಸ್ಥಾನ ನಿರ್ಧಾರ ಆಗುವುದಿಲ್ಲ. ಹೈಕಮಾಂಡ್ ಮಾತೇ ಅಂತಿಮ.

ವರಿಷ್ಠರು ಹೇಳಿದ್ದನ್ನು ಕೇಳಬೇಕು. ಹೈಕಮಾಂಡ್‌ನವರು ಏನು ಕೆಲಸ ಕೊಡುತ್ತಾರೊ ಅದನ್ನು ನಾವು ಒಪ್ಪಿಕೊಳ್ಳಲೇಬೇಕು ಎಂದಿದ್ದರು.

ನವೆಂಬರ್‌ನಲ್ಲಿ ಯಾವುದೇ ಕ್ರಾಂತಿಯಿಲ್ಲ.

ಅದೆಲ್ಲವೂ ಸೃಷ್ಟಿಯಷ್ಟೆ. ಕಾಂಗ್ರೆಸ್ ಪಕ್ಷದಲ್ಲಿ ನಿರ್ಧಾರಗಳು ಹೈಕಮಾಂಡ್ ಮಟ್ಟದಲ್ಲಿಯೇ ಆಗುತ್ತವೆ.

ಸಂಖ್ಯಾಬಲದಿಂದ ಯಾವುದೂ ನಿರ್ಧಾರವಾಗುವುದಿಲ್ಲ. ಹೈಕಮಾಂಡ್ ಎಲ್ಲವನ್ನೂ ನಿರ್ಧರಿಸುತ್ತದೆ. ಯಾರನ್ನು ಎಲ್ಲಿಡಬೇಕು, ಯಾವಾಗ ಸ್ಥಾನಮಾನ ನೀಡಬೇಕು, ಎಷ್ಟು ದಿನ ಕೊಡಬೇಕು ಎಂಬುದನ್ನೂ ಸಹ ಹೈಕಮಾಂಡ್ ತೀರ್ಮಾನಿಸುತ್ತದೆ ಎಂದರು.

ನನಗೆ ಪಕ್ಷದ ಬಗ್ಗೆ ಚೆನ್ನಾಗಿ ತಿಳಿದಿದೆ. ಅದರಂತೆಯೇ ನಾವು ಕೆಲಸ ಮಾಡುತ್ತಿದ್ದೇವೆ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗ ನನ್ನನ್ನು ಮತ್ತು ಸಿದ್ದರಾಮಯ್ಯ ಅವರನ್ನು ಕೂರಿಸಿ ನಮ್ಮ ಅಧಿಕಾರ, ಜವಾಬ್ದಾರಿ ಬಗ್ಗೆ ತಿಳಿಸಿದರು.

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ, ನಾನು ಉಪಮುಖ್ಯಮಂತ್ರಿಯಾಗಿರಬೇಕು ಎಂದು ಹೇಳಿದರು. ನಾವು ಅದರಂತೆ ಒಪ್ಪಿಕೊಂಡು ಬಂದು ಈಗ ಕೆಲಸ ಮಾಡುತ್ತಿದ್ದೇವೆ.

ಉಳಿದ ಚರ್ಚೆಗಳ ಬಗ್ಗೆ ಮಾಧ್ಯಮಗಳಲ್ಲಿ ಚರ್ಚಿಸುವ ಅವಶ್ಯಕತೆಯಿಲ್ಲ. ದೆಹಲಿ ನಾಯಕರು ನನಗೆ ವಹಿಸಿರುವ ಕೆಲಸ ಮಾಡುತ್ತಿದ್ದೇನೆ ಎಂದು ತಿಳಿಸಿದರು. ನಾನು ಈವರೆಗೆ ಗುಂಪುಗಾರಿಕೆಯಲ್ಲಿ ನಂಬಿಕೆ ಇಟ್ಟವನಲ್ಲ. ಕಾಂಗ್ರೆಸ್‌ನ 140 ಶಾಸಕರು ನನಗೆ ಬೇಕಾದವರೇ.

ನನಗೆ ಯಾರೂ ಜೈಕಾರ ಹಾಕುವುದು ಬೇಡ. ನನಗೆ ಹಿಂಬಾಲಕರೂ ಬೇಡ. ಹೈಕಮಾಂಡ್ ಹೇಳಿದಂತೆ ನಾನು ಕೇಳುತ್ತೇನೆ' ಎಂದು ಸ್ಪಷ್ಟಪಡಿಸಿದರು.

ಈ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಹೈಕಮಾಂಡ್ ಆಶೀರ್ವಾದವೂ ಬೇಕು. ಶಾಸಕರ ಬೆಂಬಲ ಇಲ್ಲದೇ ಯಾರೂ ಮುಖ್ಯಮಂತ್ರಿ ಆಗುವುದಕ್ಕೆ ಆಗುವುದಿಲ್ಲ. ಬಹುಮತ ಇದ್ದರೆ ಆಗಬಹುದು ಎಂದರು.



ಔತಣಕೂಟಕ್ಕೂ ಸಂಪುಟ ಪುನರ್ ರಚನೆಗೂ ಯಾವುದೇ ಸಂಬಂಧ ಇಲ್ಲ. ಆಗಾಗ ಊಟಕ್ಕೆ ಕರೆಯುತ್ತೇನೆ. ಊಟಕ್ಕೆ ಕರೆದಿದ್ದರಲ್ಲಿ ಯಾವುದೇ ವಿಶೇಷವಿಲ್ಲ. ನಿಮಗೆ (ಮಾಧ್ಯಮ) ಹಾಗೂ ಬಿಜೆಪಿಯವರಿಗೆ ವಿಶೇಷವಾಗಿದೆ ಎಂದಿದ್ದರು.

## ಹೊಳಲು ಗ್ರಾ.ಪಂ. ಉಪಾಧ್ಯಕ್ಷರಾಗಿ ಹೆಚ್.ಸಿ. ಜಯಪ್ರಕಾಶ್ ನಾರಾಯಣ ಆಯ್ಕೆ



ಸಕ್ಕರೆನಾಡು: ಮಂಡ್ಯ: ತಾಲೂಕಿನ ಹೊಳಲು ಗ್ರಾಮದ ಗ್ರಾಮ ಪಂಚಾಯತಿಯಲ್ಲಿ ಉಪಾಧ್ಯಕ್ಷರ ಚುನಾವಣೆಯಲ್ಲಿ ಹೆಚ್.ಸಿ .ಜಯಪ್ರಕಾಶ್ ನಾರಾಯಣ ಗೆಲುವು, ಉಪಾಧ್ಯಕ್ಷರಾದ ನಾರಾಯಣ ಅವರ ರಾಜೀನಾಮೆಯಿಂದ ತೆರವಾಗಿದ್ದ ಉಪಾಧ್ಯಕ್ಷರ ಸ್ಥಾನಕ್ಕೆ ಚುನಾವಣೆಯ ನಡೆಯಿತು.

ಸುಮಾರು 13 ಸದಸ್ಯರ ಬಲವಿರುವ ಪಂಚಾಯತಿಯಲ್ಲಿ ಉಪಾಧ್ಯಕ್ಷರ ಸ್ಥಾನಕ್ಕೆ ಸೌಭಾಗ್ಯ ಹಾಗೂ ಹೆಚ್ಚಿಸಿ.ಜಯಪ್ರಕಾಶ್ ನಾರಾಯಣ ನಾಮಪತ್ರ ಸಲ್ಲಿಸಿದರು.

ನಡೆದ ಚುನಾವಣೆಯಲ್ಲಿ ಸೌಭಾಗ್ಯ ರವರಿಗೆ 6 ಮತಗಳು ಜಯಪ್ರಕಾಶ್ ನಾರಾಯಣರವರಿಗೆ 7 ಮತಗಳು ಚಲಾವಣೆಯಾಯಿತು.

ಒಂದು ಮತಗಳ ಅಂತರದಿಂದ ಎಚ್. ಸಿ. ಜಯಪ್ರಕಾಶ್ ನಾರಾಯಣ ಅವರು ಗೆಲುವು ಸಾಧಿಸಿದ್ದಾರೆ.

ಎಂದು ವೆಂಕಟರಾವ್ ರವರು ತಾಲೂಕ್ ಪಂಚಾಯತ್ ಯೋಜನಾಧಿಕಾರಿ ಮಂಡ್ಯ ರವರು ಘೋಷಿಸಿದರು. ನಂತರ ಮಾತನಾಡಿದ ನೂತನ ಉಪಾಧ್ಯಕ್ಷ ಎಚ್ .ಸಿ. ಜಯಪ್ರಕಾಶ್ ನಾರಾಯಣ ತಮ್ಮೆಲ್ಲರ ಸರ್ವ ಸದಸ್ಯರ ಬೆಂಬಲ ಹಾಗೂ ಗ್ರಾಮದ ಹಿರಿಯ ಮುಖಂಡರ ಸಹಕಾರದಿಂದ ಈ ದಿನ ಗೆಲುವು ಸಾಧಿಸಿದ್ದೇನೆ. ಮುಂದಿನ ದಿನಗಳಲ್ಲಿ ಗ್ರಾಮದ ಏಳಿಗೆಗಾಗಿ ಗ್ರಾಮದ ಅಭಿವೃದ್ಧಿಗೆ ಹೊಳಲು ಗ್ರಾಮವನ್ನ ಒಂದು ಮಾದರಿ ಗ್ರಾಮವನ್ನಾಗಿ ಮಾಡುವ ನಿಟ್ಟಿನಲ್ಲಿ ತಮ್ಮೆಲ್ಲರ ಸಹಕಾರ ಮುಖ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ರಮ್ಯಾ ಚೇತನ್, ಮಾಜಿ ಅಧ್ಯಕ್ಷ ಎಚ್. ಡಿ. ರವಿ, ಗ್ರಾಮದ ಮುಖಂಡರಾದ ಜೆಟ್ಟಿಕುಮಾರ್, ಪಟೇಲ್ ರಾಮು, ಮಂಜು,ಚೇತನ್, ಚಂದನ್, ಕುಮಾರ್, ಸೂರಿ, ಶ್ರೀನಿವಾಸ್, ಶಿವಲಿಂಗು, ಹಿಂದೂಧರ, ಶಂಕರ್, ನಾಗೇಶ್, ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಬಿ.ಎಸ್ .ಸಂತೋಷ್, ಹಾಗೂ ಪಂಚಾಯತಿಯ ಸರ್ವ ಸದಸ್ಯರು ಸಿಬ್ಬಂದಿ ವರ್ಗದವರು ಗ್ರಾಮದ ಮುಖಂಡರು ನೂತನ ಉಪಾಧ್ಯಕ್ಷರನ್ನ ಸನ್ಮಾನಿಸಿ ಅಭಿನಂದಿಸಲಾಯಿತು.

## ನ.5ರಿಂದ 9ರವರೆಗೆ ಕನ್ನಂಬಾಡಿ ಉತ್ಸವ




ಸಕ್ಕರೆನಾಡು: ಮಂಡ್ಯ: ಅಸೋಸಿಯೇಷನ್ ಆಪ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್(ಎಸಿಸಿಇ)(ಭಾರತ), ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ವತಿಯಿಂದ ಕನ್ನಂಬಾಡಿ ಉತ್ಸವ ಕಾರ್ಯಕ್ರಮವನ್ನು ನ.5ರಿಂದ 9ರವರೆಗೆ ಆಯೋಜಿಸಲಾಗಿದೆ ಎಂದು ಟ್ರಸ್ಟ್ನ ಅಧ್ಯಕ್ಷ ಎ.ಸಿ.ರಮೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕನ್ನಂಬಾಡಿ ಉತ್ಸವದ ಮೂಲಕ ಜನರ ಜೀವನಕ್ಕೆ ಉಪಯೋಗವಾಗುವ ವಿಷಯಗಳ ಸಂಬಂಧ ಮಾಹಿತಿ, ಕೈಗೆಟುಕುವ ದರದಲ್ಲಿ ಸಾಮಗ್ರಿಗಳನ್ನು ಒದಗಿಸುವ ಕೆಲಸ ಮಾಡಲಾಗುತ್ತಿದೆ ಎಂದರು.

ಅಡಿ ಕಟ್ಟಡ ಸಾಮಗ್ರಿಗಳ ಮೇಳ, ಖಾದಿ ಮೇಳ, ಕೃಷಿ ಮೇಳ, ವಾಹನಗಳ ಮೇಳ, ಗೃಹೋಪಯೋಗಿ ಸಾಮಗ್ರಿಗಳ ಮೇಳ, ಆಹಾರ ಮೇಳ, ಅಮ್ಯೂಸ್ಮೆಂಟ್ ಪಾರ್ಕ್, ರಸ ಸಂಜೆ ಕಾರ್ಯಕ್ರಮ, ಲಕ್ಕಿ ಡಿಪ್ ಕೂಪನ್ ಮೂಲಕ ಉಡುಗೊರೆ ವಿತರಣೆ ಕಾರ್ಯಕ್ರಮಗಳು ನೆರವೇರಲಿವೆ ಎಂದು ಹೇಳಿದರು.

ಎಸಿಸಿಇ ಅಧ್ಯಕ್ಷ ಎಸ್.ನವೀನ್ ಮಾತನಾಡಿ, ಕನ್ನಂಬಾಡಿ ಉತ್ಸವದ ಮೂಲಕ ಬಿಲ್ಡ್ 360 ಎಕ್ಸ್ಪೋ ನಡೆಸುತ್ತಿದ್ದು, ಕಟ್ಟಡ ನಿರ್ಮಾಣಕೆಕ ಸಂಬಂಧಿಸಿದಂತೆ ಎಲ್ಲಾ ರೀತಿಯ ಮಾಹಿತಿ, ಕಟ್ಟಡ ನಿರ್ಮಾಣ ಸಾಮಗ್ರಿಗಳ ಹಾಗೂ ನೂತನ ಆವಿಷ್ಕಾರಗಳ ಪರಿಚಯ

ಮತ್ತು ಕಟ್ಟಡ ನಿರ್ಮಾಣ ಸಂಬಂಧ ಜಾಗೃತಿಯನ್ನೂ ಮೂಡಿಸಲಾಗುವುದು ಎಂದು ಮಾಹಿತಿ ಹಂಚಿಕೊಂಡರು.

ಗೋಷ್ಠಿಯಲ್ಲಿ ಟ್ರಸ್ಟ್ನ ಖಜಾಂಚಿ ಆರ್.ಎನ್.ಸೋಮಶೇಖರ್, ಎಸಿಸಿಇ ವ್ಯವಸ್ಥಾಪಕ ಸಮಿತಿ ಸದಸ್ಯ ಕೆ.ಎಸ್.ಪರೀಕ್ಷಿತ್ ರಾಘವ್, ರೋಟರಿ ಜಿಲ್ಲಾಧ್ಯಕ್ಷ ಸಿರಿ ಭೈರವ ರಾಜಶೇಖರ ಗೌಡ ಇದ್ದರು.

## ಸ್ಥಳದಲ್ಲೇ ಟೆಲಿಸ್ಕೋಪ್ ತಯಾರಿಸಿ ಹಲವು ದಾಖಲೆ ಬರೆದ ಡ್ಯಾಫೋಡಿಲ್ಸ್ ಶಾಲೆ ಮಕ್ಕಳು



ಸಕ್ಕರೆನಾಡು: ಮಂಡ್ಯ: ವಿಎಲ್‌ಎನ್ ಎಜುಕೇಷನ್ ಟ್ರಸ್ಟ್ನ ಡ್ಯಾಫೋಡಿಲ್ಸ್ ಶಾಲೆಯ ವಿದ್ಯಾರ್ಥಿಗಳಾದ ತ್ರಿಷಾ.ಪಿ ಗೌಡ ಹಾಗೂ ಎಚ್.ವಿ.ಕುಮುದ ರಾಜ್ಯ ಮಟ್ಟದ ಪ್ರಥಮ ಟೆಲಿಸ್ಕೋಪ್ ತರಬೇತಿ ಶಿಬಿರದಲ್ಲಿ ಸ್ಥಳದಲ್ಲೇ ಟೆಲಿಸ್ಕೋಪ್ ತಯಾರಿಸಿ ಹಲವು ದಾಖಲೆಗಳಿಗೆ ಪಾತ್ರರಾಗಿದ್ದಾರೆ ಎಂದು ಟ್ರಸ್ಟ್ನ ಕಾರ್ಯದರ್ಶಿ ಸುಜಾತ ಕೃಷ್ಣ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅ.1ರಿಂದ 9ವರೆಗೆ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಇಸ್ರೋ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಸಹಯೋಗದಲ್ಲಿ ದೊಡ್ಡಬಳ್ಳಾಪುರದಲ್ಲಿ ನಡೆದ 'ನಾನೂ ವಿಜ್ಞಾನಿ-2025' ಶಿಬಿರದ ಮೂಲಕ ಈ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯ ಮಟ್ಟದ ಪ್ರಥಮ ಟೆಲಿಸ್ಕೋಪ್ ತರಬೇತಿ ಶಿಬಿರದಲ್ಲಿ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಹುಲಿಕಲ್ ನಟರಾಜ್ ಅವರ ಮಾರ್ಗದರ್ಶನದಲ್ಲಿ ನಡೆದ ಶಿಬಿರದಲ್ಲಿ ರಾಜ್ಯದ 168 ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಅದರಲ್ಲಿ 150 ವಿದ್ಯಾರ್ಥಿಗಳು ಟೆಲಿಸ್ಕೋಪ್ ತಯಾರಿಸಿ ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋತ್ ಅವರಿಂದ ಪ್ರಶಸ್ತಿ ಪಡೆದಿರುತ್ತಾರೆ ಎಂದರು.

150 ವಿದ್ಯಾರ್ಥಿಗಳ ಪೈಕಿ 5 ಮಂದಿಯುಳ್ಳ ತಂಡ ರಚಿಸಿದ್ದು, ತ್ರಿಷಾ.ಪಿ ಗೌಡ ಹಾಗೂ

ಎಚ್.ವಿ.ಕುಮುದ ಅವರೊಂದಿಗೆ ಜಿಲ್ಲೆಯಿಂದ ಭಾಗವಹಿಸಿದ್ದ ವಿನುತ, ಚಿರಂತ್, ಸಾತ್ವಿಕ್ ಅವರು ಟೆಲಿಸ್ಕೋಪ್ ತಯಾರಿಸಲು ಪಾತ್ರ ವಹಿಸಿದ್ದಾರೆ. ಇವರ ಸಾಧನೆಯು 'ವರ್ಲ್ಡ್ ಬುಕ್ ಆಫ್ ರೆಕಾರ್ಡ್', 'ಇಂಡಿಯನ್ ಬುಕ್ ಆಫ್ ರೆಕಾರ್ಡ್', 'ಏಷ್ಯಾ ಬುಕ್ ಆಫ್ ರೆಕಾರ್ಡ್'ನಲ್ಲಿ ದಾಖಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಟೆಲಿಸ್ಕೋಪ್ ತರಬೇತಿ ಶಿಬಿರದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಾದ ತ್ರಿಷಾ.ಪಿ ಗೌಡ ಹಾಗೂ ಎಚ್.ವಿ.ಕುಮುದ ತಮ್ಮ ಅನುಭವನ್ನು ಇದೇ ಸಂದರ್ಭದಲ್ಲಿ ಹಂಚಿಕೊಂಡರು. ತಾವು ತಯಾರಿಸಿದ ಟೆಲಿಸ್ಕೋಪ್‌ಗೆ ಸುಮಾರು 7ರಿಂದ 8 ಸಾವಿರ ರೂ.ಗಳು ತಗುಲಿರಬಹುದು ಎಂದು ಪ್ರಶ್ನೆಗೆ ಉತ್ತರ ನೀಡಿದರು.

ಗೋಷ್ಠಿಯಲ್ಲಿ ಟ್ರಸ್ಟ್ನ ಅಧ್ಯಕ್ಷ ಡಾ.ಪ್ರದೀಪ್‌ಕುಮಾರ್ ಹೆಬ್ರಿ, ಮುಖ್ಯ ಶಿಕ್ಷಕಿ ಸಿ.ಎನ್.ನಯನ, ಶಿಕ್ಷಕಿ ತರುಣ ಇದ್ದರು.

## ಬೌದ್ಧ ಸಮ್ಮೇಳನಕ್ಕೆ ಮಂಡ್ಯದಿಂದ ಹೊರಟ ಬೌದ್ಧ ಅನುಯಾಯಿಗಳು




ಸಕ್ಕರೆನಾಡು: ಮೈಸೂರಿನ ಮಹಾರಾಜ ಕಾಲೇಜಿನ ಮೈದಾನದಲ್ಲಿ ನಡೆಯುವ ಅಂತರಾಷ್ಟ್ರೀಯ ಮಟ್ಟದ ಬೌದ್ಧ ಮಹಾಸಮ್ಮೇಳನಕ್ಕೆ ಮಂಡ್ಯ ನಗರದ ಭಾರತೀಯ ಬೌದ್ಧ ಮಹಾಸಭಾದ ವತಿಯಿಂದ ಕಾರು ಮತ್ತು ಬೈಕ್‌ಗಳಲ್ಲಿ ಜಾಥಾ ಹೊರಟರು.

ಬೌದ್ಧಮಹಾಸಭಾದ ಗುರುಮೂರ್ತಿ ಮಾತನಾಡಿ ಅಕ್ಟೋಬರ್ 14 ರಂದು ಬೌದ್ಧ ಧರ್ಮವನ್ನು ಅಪ್ಪಿಕೊಂಡು ಬುದ್ಧರಾಗಿದ್ದು, ಅದರ ಅಂಗವಾಗಿ ಮೈಸೂರಿನಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಬೌದ್ಧ ಅನುಯಾಯಿಗಳು ಹಾಗೂ ಕಾರ್ಯಕರ್ತರು ಮೈಸೂರಿಗೆ ತೆರಳಿದ್ದೇವೆ, ಆ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಹಾಸಭಾದ ಎಸ್.ಪಿ.ನಾರಾಯಣಸ್ವಾಮಿ, ತಾಳಶಾಸನ ಮೋಹನ್, ಅನಿಲ್‌ಕುಮಾರ್, ವೆಂಕಟಾಚಲಯ್ಯ, ನಿರಂಜನ್, ಶಿವರಾಮ್, ಸತ್ಯಾನಂದ, ವಕೀಲ ಜೆ.ರಾಮಯ್ಯ, ಪ್ರೇಮ, ಕುಮಾರಿ, ವೆಂಕಟೇಶ್ ಭಾಗವಹಿಸಿದ್ದರು

# ಜಾತಿ, ಧರ್ಮ ಮೀರಿ ಬೆಳೆದ ರಾಜು ತಾಳಿಕೋಟಿ

ತಾಳಿಕೋಟೆ: ರಾಜು ತಾಳಿಕೋಟಿ ಹೃದಯಾಘಾತದಿಂದ ಸಾವನ್ನಪ್ಪಿದರೆಂಬ ಸುದ್ದಿ ಸೋಮವಾರ ಪಟ್ಟಣಿಗರಿಗೆ ಬರಸಿಡಿಲು ಬಡಿದಂತೆ ಎರಗಿದ್ದು ಜನತೆಯನ್ನು ಶೋಕಸಾಗರದಲ್ಲಿ ಮುಳುಗಿಸಿತು. ಪಟ್ಟಣದಲ್ಲಿ ಸೂತಕದ ಛಾಯೆ ಆವರಿಸಿತು. ಹೆತ್ತವರು ಇಟ್ಟ ಹೆಸರು ರಾಜೇಸಾಬ ಆದರೂ ಎಲ್ಲರಿಗೂ ಅವರು ಪ್ರೀತಿಯ ರಾಜು ಆಗಿದ್ದರು.



ತಂದೆ ಮುಕ್ತುಮಸಾಬ್ ತಾಳಿಕೋಟಿಯವರ ನಾಲ್ಕು ಮಕ್ಕಳಲ್ಲಿ ಕೊನೆಯವರು. ಇಬ್ಬರು ಅಕ್ಕಂದಿರು ಒಬ್ಬ ಅಣ್ಣ, 11ನೆಯ ವಯಸ್ಸಿಗೆ ಹೆತ್ತವರನ್ನು ಕಳೆದುಕೊಂಡು ಓದು ಮೊಟಕಾಗಿ, ಹೊಟ್ಟೆಪಾಡಿಗಾಗಿ ಹೋಟೆಲ್‌ನಲ್ಲಿ ಸಪ್ಲೈಯರ್ ಅಲ್ಲದೆ ಲಾರಿ ಕ್ಲೀನರ್, ಚಿತ್ತರಗಿ ನಾಟಕ ಕಂಪನಿಯಲ್ಲಿ ಗೇಟ್ ಕೀಪರ್ ಆಗಿ, ಪ್ರಚಾರ ಕಲಾವಿದನಾಗಿ, ಪರದೆ ಎಳೆಯುತ್ತ ಗ್ರೀನ್ ರೂಂ ಕಲಾವಿದರಾದರು.

ಪಾತ್ರಧಾರಿಯೊಬ್ಬ ಕೈ ಕೊಟ್ಟ ವೇಳೆ ಬಣ್ಣ ಹಚ್ಚಿದ ರಾಜು ಅವರು ಮತ್ತೆ ಹಿಂತಿರುಗಿ ನೋಡುವ ಪ್ರಮೇಯ ಬರಲಿಲ್ಲ. ಅವರೊಳಗಿನ ಕಲಾವಿದ ಬೆಳಕಿಗೆ ಬಂದಿದ್ದ. ತಂದೆ–ತಾಯಿ ಕಟ್ಟಿದ್ದ 'ಖಾಸ್ಗತೇಶ್ವರ ನಾಟ್ಯ ಸಂಘ'ಕ್ಕೆ ಅಣ್ಣನ ಜೊತೆ ಸೇರಿ 1983ರಲ್ಲಿ ಮರುಜೀವ ತುಂಬಿದರು.

ಕುಡುಕರ ಜೀವನವನ್ನು ಹಾಸ್ಯವಾಗಿ ಚಿತ್ರಿಸಿದ 'ಕಲಿಯುಗದ ಕುಡುಕ' ನಾಟಕ 40 ಸಾವಿರಕ್ಕೂ ಅಧಿಕ ಕಲಾಪ್ರದರ್ಶನ ಕಂಡಿತ್ತು. ಕುಡುಕ ವಿನ್ಯಾ ಆಗಿ ಸಂಭಾಷಣೆ, ನಟನೆಯಿಂದ ನಾಡಿನ ಕಲಾರಸಿಕರ ಹೃದಯ ಸಾಮ್ರಾಜ್ಯಕ್ಕೆ ಲಗ್ಗೆ ಇಟ್ಟಾಗ ಸಿನಿರಂಗ ಕೈ ಮಾಡಿ ಅವಕಾಶ ನೀಡಿತು.

ಚಿತ್ರರಂಗದಲ್ಲಿ ಪ್ರಸಿದ್ಧಿ ಪಡೆದರೂ ತವರ ಪ್ರೀತಿ, ನೆಂಟಸ್ತಿಕೆ ಕಳೆದುಕೊಳ್ಳಲಿಲ್ಲ. ಜಾತಿ, ಧರ್ಮ ಮೀರಿ ಪಟ್ಟಣಿಗರ ಮನೆಯ ಮಗನಾಗಿ, ಪ್ರೀತಿಯ ರಾಜು ಆಗಿ ಬೆಳೆದಿದ್ದರು. ಮುಖಕ್ಕೆ ಬಣ್ಣ ಹಚ್ಚಿದ್ದರೂ ಅವರು ಜಾತಿಯ ಬಣ್ಣ ಬಳಿದುಕೊಳ್ಳಲೇ ಇಲ್ಲ.

ತಾಳಿಕೋಟೆ ಖಾಸ್ಗತೇಶ್ವರಮಠದ ಪ್ರಸಾದ ನಿಲಯದಲ್ಲಿದ್ದು ನಾಲ್ಕನೆಯ ತರಗತಿವರೆಗೆ ಓದಿ. ಆಗಲೇ ಸಂಗೀತಾಭ್ಯಾಸ ಮಾಡಿದ್ದರು. ಪಟ್ಟಣದ ಆರಾಧ್ಯ ದೈವ ಖಾಸ್ಗತೇಶ್ವರ ಮಠದ ಪರಮಭಕ್ತರಾಗಿದ್ದರು. ಪ್ರತಿ ವರ್ಷ ನಡೆಯುವ ಜಾತ್ರೆ ಹಾಗೂ ಸಂಗೀತಶಾಲೆಯ ಕಾರ್ಯಕ್ರಮಕ್ಕೆ ತಪ್ಪದೇ ಬರುತ್ತಿದ್ದರು. ಹಳೆಯ ಗೆಳೆಯರನ್ನು ಮಾತನಾಡಿಸದೇ ಹೋಗುತ್ತಿರಲಿಲ್ಲ.

ಚಿಕ್ಕವರಿಂದ ದೊಡ್ಡವರವರೆಗೆ ಎಲ್ಲರನ್ನೂ ಮಾತನಾಡಿಸುವ ಎಲ್ಲರಿಗೂ ಬೇಕಾದ ವ್ಯಕ್ತಿ ರಾಜು ಆಗಿದ್ದರು. ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಅವರೊಂದಿಗೆ ಸೇರಿ ಪ್ರತ್ಯೇಕ ಉತ್ತರ ಕರ್ನಾಟಕದ ಕೂಗಿಗೂ ದನಿಯಾಗಿ ಜೊತೆ ನೀಡಿದ್ದರು. ವಿಜಯನಗರದ ಯುದ್ಧದಲ್ಲಿ ತಾಳಿಕೋಟೆ ಕದನವೆಂದೇ ಖ್ಯಾತಿ ಪಡೆದ ಊರು ಕಲಾವಿದ ರಾಜು ತಾಳಿಕೋಟಿ ಅವರಿಂದ ನಾಡಿನಾದ್ಯಂತ ಮತ್ತೆ ಮುನ್ನೆಲೆಗೆ ಬಂದಿತ್ತು.

ಧಾರವಾಡದ ರಂಗಾಯಣದ ನಿರ್ದೇಶಕರಾಗಿ ಕಂಡಿದ್ದ ಅಭಿವೃದ್ಧಿ ಕನಸು ನನಸಾಗುವ ಮುನ್ನ ಇನ್ನಿಲ್ಲವಾದರೂ ಪಟ್ಟಣ ಹಾಗೂ ನಾಡಿನ ಕಲಾರಸಿಕರ ಮನದಲ್ಲಿ ಅಮರರಾಗಿ ಉಳಿಯಲಿದ್ದಾರೆ.

# ಬೆಳಗಾವಿಯಲ್ಲಿ ಮತ್ತೆ ಪಾರುಪತ್ಯ ಮೆರೆದ ಜಾರಕಿಹೊಳಿ ಬ್ರದರ್ಸ್

ಬೆಳಗಾವಿ.: ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿದ್ದ ಬೆಳಗಾವಿ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಮತ್ತೆ ಜಾರಕಿಹೊಳಿ ಬ್ರದರ್ಸ್ ಪಾರುಪತ್ಯ ಮರೆದಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಸದ್ಯ ರಾಜ್ಯವೇ ತಿರುಗಿ ನೋಡುವ ಡಿಸಿಸಿ ಬ್ಯಾಂಕ್ ನ 16 ನಿರ್ದೇಶಕ ಸ್ಥಾನಕ್ಕೆ ಇದೇ ಕ್ಟೋಬರ್ 19ರಂದು ಚುನಾವಣೆ ನಡೆಯಲಿದೆ.

ಆದ್ರೆ, ಮತದಾನಕ್ಕೂ ಮುನ್ನವೇ ಜಾರಕಿಹೊಳಿ ಬ್ರದರ್ಸ್ ತಮ್ಮ ಪೆನಲ್?ನ 9 ಜನರನ್ನು ಅವಿರೋಧವಾಗಿ ಗೆಲ್ಲಿಸಿದ್ದಾರೆ. ಈ ಮೂಲಕ ಡಿಸಿಸಿ ಬ್ಯಾಂಕ್ ಚುನಾವಣೆಯನ್ನು ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ಇನ್ನು ಈ ಬಾರಿ ಜಾರಕಿಹೊಳಿ ಬ್ರದರ್ಸ್? ವಿರುದ್ಧ ಮೀಸೆ ತಿರುವಿದ್ದ ಕತ್ತಿ ಹಾಗೂ ಲಕ್ಷ್ಮಣ ಸವದಿಗೆ ಶಾಕ್ ಕೊಟ್ಟಿದ್ದಾರೆ.

ಇದೇ ಅಕ್ಟೋಬರ್ 19ರಂದು ಹದಿನಾರು ಸ್ಥಾನಗಳ ಪೈಕಿ ಏಳು ಸ್ಥಾನ ಗಳಿಗೆ ಮಾತ್ರ ಮತದಾನ ನಡೆಯುತ್ತಿದೆ. ಇಂದು ನಾಮಪತ್ರ ವಾಪಾಸ್ ಪಡೆಯಲು ಕೊನೆಯ ದಿನವಾಗಿತ್ತು. ಅಷ್ಟಕ್ಕೂ ಈ ಚುನಾವಣೆ ಜಾರಕಿಹೊಳಿ ಮತ್ತು ಕತ್ತಿ ಆ?ಯಂಡ್ ಸವದಿ ನಡುವೆ ಫೈಟ್ ನಡೆಯುತ್ತಿದೆ. ಇದರಲ್ಲಿ ಜಾರಕಿಹೊಳಿ ಪೆನಲ್ ದಿಂದ ಹದಿಮೂರು ತಾಲೂಕಿನಲ್ಲಿ ಅಭ್ಯರ್ಥಿಗಳು ಕಣಕ್ಕಿಳಿದಿದ್ರೆ ಇನ್ನುಳಿದಂತೆ ಕತ್ತಿ ತಮ್ಮ ಕ್ಷೇತ್ರಕ್ಕೆ ಸೀಮಿತವಾಗಿ ಉಳಿದು ಕೊಂಡ್ರೆ ಲಕ್ಷ್ಮಣ ಸವದಿ ತಮ್ಮದೇ ಪತ್ಯೇಕ ಪೆನಲ್ ಎಂದು ಹೇಳುವ ಮೂಲಕ ವಿರೋಧಿಗಳಿಗೆ ಎಚ್ಚರಿಕೆ ಸಂದೇಶ ರವಾನಿಸಿದ್ದರು.

9 ಜನ ಅವಿರೋಧ ಆಯ್ಕೆ

ಇನ್ನೂ ಜಾರಕಿಹೊಳಿ ಪೆನಲ್ ನಲ್ಲಿದ್ದ ಏಳು ಜನರು ಈಗಾಗಲೇ ಅವಿರೋಧ ವಾಗಿ ಆಯ್ಕೆಯಾಗಿದ್ರೆ ಸ್ವತಂತ್ರವಾಗಿ ಸ್ಪರ್ಧೆ ಮಾಡಿದ್ದ ಗಣೇಶ್ ಹುಕ್ಕೇರಿ ಕೂಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇತ್ತ ಸವದಿ ಬಣದಲ್ಲಿ ಗುರುತಿಸಿಕೊಂಡಿದ್ದ ರಾಜು ಕಾಗೆ ಇಂದು ಏಕಾಏಕಿ ಸತೀಶ್ ಜಾರಕಿಹೊಳಿ ಅವರ ಜೊತೆಗೆ ಕಾಣಿಸಿಕೊಳ್ಳುವುದರ ಜೊತೆಗೆ ಪ್ರತಿಸ್ಪರ್ಧಿಯಾಗಿದ್ದ ಮಾಜಿ ಸಚಿವ ಶ್ರೀಮಂತ್ ಪಾಟೀಲ್ ಅವರ ಪುತ್ರ ಶ್ರೀನಿವಾಸ ಪಾಟೀಲ್ ಅವರ ನಾಮ ಪತ್ರ ವಾಪಾಸ್ ತೆಗೆಸುವುದರಲ್ಲಿ ಯಶಸ್ವಿಯಾಗಿ ಕಡೆಗೂ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಮೂಲಕ ಬಾಲಚಂದ್ರ ಜಾರಕಿಹೊಳಿ ಪೆನಲ್ ನಲ್ಲಿ ಗುರುತಿಸಿಕೊಂಡಿದ್ದ ಏಳು ಜನ ಹಾಗೂ ಇಬ್ಬರು ಸೇರಿ ಒಂಬತ್ತು ಜನ ಅವಿರೋಧ ವಾಗಿ ಆಯ್ಕೆಯಾಗುವುದರ ಮೂಲಕ ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿದ್ದಾರೆ.




ಯಾರು ಯಾವ ತಾಲೂಕಿನಿಂದ ಆಯ್ಕೆ?

ಇನ್ನೂ ಯಾವ ತಾಲೂಕಿನಿಂದ ಯಾರೆಲ್ಲಾ ಆಯ್ಕೆಯಾಗಿದ್ದಾರೆ ಎನ್ನುವುದನ್ನು ನೋಡೊದಾದರೆ, ಬಾಲಚಂದ್ರ ಪೆನಲ್ ನಲ್ಲಿ ಗುರುತಿಸಿಕೊಂಡ ಯರಗಟ್ಟಿ ತಾಲೂಕಿನಿಂದ ವಿಶ್ವಾಸ್ ವೈದ್ಯ, ಗೋಕಾಕ್ ದಿಂದ ಅಮರನಾಥ್ ಜಾರಕಿಹೊಳಿ, ಮೂಡಲಗಿಯಿಂದ ನೀಲಕಂಠ, ಬೆಳಗಾವಿ ತಾಲೂಕಿನಿಂದ ರಾಹುಲ್ ಜಾರಕಿಹೊಳಿ, ಸವದತ್ತಿಯಿಂದ ವಿರೂಪಾಕ್ಷ ಮಾಮನಿ, ಖಾನಾಪುರದಿಂದ ಅರವಿಂದ್ ಪಾಟೀಲ್, ಅದರ್ಸ್ ವತಿಯಿಂದ ಎಂಎಲ್ಸಿ ಚನ್ನರಾಜ ಹಟ್ಟಿಹೊಳಿ ಅವಿರೋಧವಾಗಿ ಆಯ್ಕೆಯಾಗಿದ್ರೇ. ಇತ್ತ ಸತೀಶ್ ಜಾರಕಿಹೊಳಿ ಮಧ್ಯಸ್ಥಿಕೆಯಿಂದ ಕಾಗವಾಡದಿಂದ ರಾಜು ಕಾಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇನ್ನು ಯಾರ ಬಣದಲ್ಲಿ ಗುರುತಿಸಿಕೊಳ್ಳದ ಗಣೇಶ್ ಹುಕ್ಕೇರಿ ಚಿಕ್ಕೋಡಿ ತಾಲೂಕಿನಿಂದ ಆಯ್ಕೆಯಾಗಿದ್ದಾರೆ.

ಇನ್ನುಳಿದ 7 ತಾಲೂಕಿನಲ್ಲಿ ಯಾರ್ಯಾರಿಗೆ ಫೈಟ್?

ಏಳು ತಾಲೂಕಿನಲ್ಲಿ ಚುನಾವಣೆ ನಡೆಯುತ್ತಿದ್ದ ಹುಕ್ಕೇರಿಯಲ್ಲಿ ರಮೇಶ್ ಕತ್ತಿ ವರ್ಸಸ್ ಜಾರಕಿಹೊಳಿ ನಡುವೆ ಫೈಟ್ ನಡೆಯುತ್ತಿದೆ. ಅಥಣಿಯಲ್ಲಿ ಲಕ್ಷ್ಮಣ್ ಸವದಿ ವರ್ಸಸ್ ಮಾಜಿ ಶಾಸಕ ಮಹೇಶ್ ಕುಮಟಳ್ಳಿ ನಡುವೆ ಫೈಟ್ ಇದೆ. ಬೈಲಹೊಂಗಲದಲ್ಲಿ ಮಹಾಂತೇಶ್ ದೊಡ್ಡಗೌಡರ ಮತ್ತು ವಿ.ಐ ಪಾಟೀಲ್, ಕಿತ್ತೂರಿನಲ್ಲಿ ಶಾಸಕ ಬಾಬಾಸಾಹೇಬ್ ಪಾಟೀಲ್ ಸಹೋದರ ನಾನಾಸಾಹೇಬ್ ಪಾಟೀಲ್ ಹಾಗೂ ವಿಕ್ರಂ ಇನಾಮದಾರ್, ರಾಮದುರ್ಗದಲ್ಲಿ ಮಾಜಿ ಶಾಸಕ ಮಹಾದೇವಪ್ಪ ಯಾದವಾಡ ಸಹೋದರ ಮಲ್ಲಣ್ಣ ಯಾದವಾಡ ಮತ್ತು ಧವಣ್ ನಡುವೆ ಫೈಟ್ ಇದೆ. ನಿಪ್ಪಾಣಿಯಲ್ಲಿ ಮಾಜಿ ಸಂಸದ ಅಣ್ಣಾಸಾಹೇಬ್ ಪಾಟೀಲ್ ಹಾಗೂ ಉತ್ತಮ್ ಪಾಟೀಲ್ ನಡುವೆ, ರಾಯಬಾಗದಲ್ಲಿ ಕೂಡ ಚುನಾವಣೆ ನಡೆಯುತ್ತಿದೆ.

ಇನ್ನೂ ರಾಮದುರ್ಗ ತಾಲೂಕಿನಿಂದ ಸ್ಪರ್ಧೆ ಮಾಡಿದ್ದ ಸರ್ಕಾರದ ಮುಖ್ಯ ಸಚೇತಕ ಅಶೋಕ ಪಟ್ಟಣ ಕೊನೆ ಕ್ಷಣದಲ್ಲಿ ನಾಮಪತ್ರ ವಾಪಾಸ್ ಪಡೆದಿದ್ದಾರೆ. ಸೋಲಿನ ಭೀತಿ ಹಾಗೂ ಮುಂದೆ ಮಂತ್ರಿ ಸ್ಥಾನ ಕೈತಪ್ಪುವ ಭೀತಿಯಿಂದ ಈ ರೀತಿ ನಿರ್ಧಾರಕ್ಕೆ ಬಂದು ನಾಮಪತ್ರ ವಾಪಾಸ್ ಪಡೆದಿದ್ದಾಗಿ ಹೇಳಿದ್ದಾರೆ.

ಏಳು ತಾಲೂಕಿನಲ್ಲಿ ಅಕ್ಟೋಬರ್ 19ರಂದು ಚುನಾವಣೆ ನಡೆಯಲಿದೆ. ಈಗಾಗಲೇ ತಮ್ಮ ತಮ್ಮ ಮತದಾರರನ್ನ ಅಭ್ಯರ್ಥಿಗಳು ಗೋವಾ ಸೇರಿದಂತೆ ಬೇರೆ ಬೇರೆ ಪ್ರದೇಶಕ್ಕೆ ಟೂರ್ ಗೆ ಕರೆದುಕೊಂಡು ಹೋಗಿದ್ದು ಗೆಲ್ಲಲು ನಾನಾ ಕಸರತ್ತು ನಡೆಸುತ್ತಿದ್ದಾರೆ. ಅದೇನೆ ಹೇಳಿ ಜಿಲ್ಲೆಯಲ್ಲಿ ಮತ್ತೊಮ್ಮೆ ಜಾರಕಿಹೊಳಿ ಬ್ರದರ್ಸ್ ಕಿಂಗ್ ಮೇಕರ್ ಆಗಿದ್ದು ಈ ಮೂಲಕ ಜಿಲ್ಲೆ ತಮ್ಮ ಕಂಟ್ರೋಲ್ ನಲ್ಲೇ ಇದೆ ಎನ್ನುವುದನ್ನು ತಮ್ಮ ರಾಜಕೀಯ ವಿರೋಧಿಗಳಿಗೆ ಸಂದೇಶ ರವಾನಿಸಿದ್ದಾರೆ.

# ನವೆಂಬರ್‌ನಲ್ಲಿ ಪ್ರಿಯಾಂಕ್ ಖರ್ಗೆಗೆ ಡಿಸಿಎಂ ಸ್ಥಾನ?

ಬೆಂಗಳೂರು, : ರಾಜ್ಯ ಕಾಂಗ್ರೆಸ್‌ನಲ್ಲಿ ಮತ್ತೊಮ್ಮೆ ಮುಖ್ಯಮಂತ್ರಿ ಬದಲಾವಣೆಯ ಚರ್ಚೆ ತೀವ್ರ ಸ್ವರೂಪವನ್ನು ಪಡೆದುಕೊಂಡಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಪವರ್ ಶೇರಿಂಗ್ ಸದ್ದು ಮಾಡುತ್ತಲೇ ಇದೆ. ಆದರೆ, ಎರಡು ವರ್ಷವಾದ್ರೂ ಈ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಯಾವುದೇ ಕ್ಲಾರಿಟಿ ಕೊಟ್ಟಿಲ್ಲ.

ಈ ಗೊಂದಲಕ್ಕೆ ತೆರೆ ಎಳೆಯಬೇಕಾದ ಕಾಂಗ್ರೆಸ್‌ನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರೇ ಈ ಪ್ರಶ್ನೆಗೆ ಮೌನಕ್ಕೆ ಶರಣಾಗಿದ್ದಾರೆ.



ನವೆಂಬರ್ ನಲ್ಲಿ ಮುಖ್ಯಮಂತ್ರಿ ಬದಲಾವಣೆ, ಸಚಿವ ಸಂಪುಟ ಪುನರ್ ರಚನೆ, ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ನೂತನ ಸಾರಥಿಯ ಆಯ್ಕೆ ಎಂಬ ಸಾಲು ಸಾಲು ಚರ್ಚೆಗಳು ನಡೆಯುತ್ತಿದ್ದು, ಈ ನಡುವೆ ನವೆಂಬರ್‌ನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರ ಪುತ್ರ ಪ್ರಿಯಾಂಕ್ ಖರ್ಗೆ ಅವರು ಉಪಮುಖ್ಯ ಮಂತ್ರಿಯಾಗುತ್ತಾರೆ ಎಂಬ ಗುಸು ಗುಸು ಕೈ ಪಾಳಯದಲ್ಲಿ ಕೇಳಿ ಬರುತ್ತಿದೆ. ಈ ಎಲ್ಲಾ ಚರ್ಚೆಗಳು ಸದ್ಯ ಕರ್ನಾಟಕ ಕಾಂಗ್ರೆಸ್‌ನೊಳಗೆ ನೂರಾರು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಇನ್ನೂ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ 'ಕೋಲ್ಡ್ ವಾರ್' ಅನ್ನು ಮತ್ತಷ್ಟು ತೀವ್ರಗೊಳಿಸಿದೆ. ಹಾಗಾದ್ರೆ, ಖರ್ಗೆಯವರ ಮೌನದ ಹಿಂದಿನ ಮರ್ಮವೇನು? ಸಿದ್ದು–ಡಿಕೆಶಿ ನಡುವಿನ ಅಧಿಕಾರ ಜಟಾಪಟಿಯ ಮುಂದಿನ ನಡೆಯ ಬಗ್ಗೆ ಸಾಕಷ್ಟು ಚರ್ಚೆಯಾಗುತ್ತಿದ್ದು, ಇದೀಗ ಪ್ರಿಯಾಂಕ್ ಖರ್ಗೆ ಅವರು ಉಪಮುಖ್ಯಮಂತ್ರಿ ಸ್ಥಾನ ನೀಡುವ ಕುರಿತು ರಾಜ್ಯ ಕಾಂಗ್ರೆಸ್‌ನಲ್ಲಿ ಹೊಸ ಸಂಚಲನವನ್ನ ಸೃಷ್ಟಿಸಿದೆ.

ನವೆಂಬರ್‌ನಲ್ಲಿ ಸರ್ಕಾರ ರಚನೆಯಾಗಿ ಭರ್ತಿ ಎರಡೂವರೆ ವರ್ಷ ತುಂಬಲಿದೆ, ಅಲಿಖಿತ ಒಪ್ಪಂದದಂತೆ ಸಿದ್ದರಾಮಯ್ಯ ಕುರ್ಚಿ ಬಿಟ್ಟು ಕೊಡಬೇಕು, ಡಿಕೆ ಶಿವಕುಮಾರ್ ಸಿಎಂ ಆಗಬೇಕು. ಈ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಮಟ್ಟದಲ್ಲಿ ಯಾವುದೇ ಕ್ಲಾರಿಫಿಕೇಷನ್ ಸಿಕ್ಕಿಲ್ಲ, ಇದು ಈಗ ಇಡೀ ಕೈ ಪಾಳೆಯವನ್ನು ನಿದ್ದೆಗೆಡಿಸಿದೆ. ಒಂದು ನಿರ್ಧಾರವನ್ನು ತೆಗೆದುಕೊಳ್ಳಬೇಕಾದ ಹೈಕಮಾಂಡ್ ಮೌನ ವಹಿಸಿದ್ದು ಎಲ್ಲರನ್ನೂ ಚಿಂತಗೀಡು ಮಾಡಿದೆ. ಈ ಬಗ್ಗೆ ಮಲ್ಲಿಕಾರ್ಜುನ್ ಖರ್ಗೆ ಮೌನವಹಿಸಿದ್ದು, ಸಿಎಂ ಬದಲಾವಣೆ ಚರ್ಚೆ ಇನ್ನೂ ಜೀವಂತವಾಗಿದೆ" ಎಂಬ ಸಂದೇಶವನ್ನು ಎರಡೂ ಬಣಗಳಿಗೆ ರವಾನಿಸಿದಂತಿದೆ.

ಇನ್ನೂ ನವೆಂಬರ್‌ಗೆ ಸಚಿವ ಸಂಪುಟ ಪುನರ್‌ರಚನೆ ಕುರಿತು ಹೈಕಮಾಂಡ್ ಈಗಾಗಲೇ ಗ್ರೀನ್ ಸಿಗ್ನಿಲ್ ನೀಡಿದೆ ಎಂದು ಕಾಂಗ್ರೆಸ್‌ನ ಹಿರಿಯ ನಾಯಕರೊಬ್ಬರು ತಿಳಿಸಿದ್ದಾರೆ. ಇತ್ತ ಸಿಎಂ ಬದಲಾವಣೆ ಕುರಿತು ಸೈಲೆಂಟ್ ಆಗಿರುವುದು ಹೈಕಮಾಂಡ್‌ನ ರಣತಂತ್ರವೇ ಎಂಬ ಅನುಮಾನವೂ ದಟ್ಟವಾಗಿದೆ. ಒಂದು ಕಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಕುರ್ಚಿ ಭದ್ರಪಡಿಸಿಕೊಳ್ಳಲು ಸರ್ವಪ್ರಯತ್ನ ನಡೆಸುತ್ತಿದ್ದರೆ, ಇನ್ನೊಂದೆಡೆ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಗಾದಿಗೇರಲು ತಮ್ಮದೇ ಆದ ದಾಳಗಳನ್ನು ಉರುಳಿಸುತ್ತಿದ್ದಾರೆ. ಇದರ ನಡುವೆ ರಾಜ್ಯ ರಾಜಕೀಯದಲ್ಲಿ ಹೆಚ್ಚು ಸಕ್ರಿಯರಾಗಿರುವ ಪ್ರಿಯಾಂಕ್ ಖರ್ಗೆ ಅವರಿಗೆ ಡಿಸಿಎಂ ಸ್ಥಾನ ನೀಡುವ ಕುರಿತು ಹೈಕಮಾಂಡ್ ಮಟ್ಟದಲ್ಲಿ ಚರ್ಚೆಯಾಗಿದೆ ಎನ್ನಲಾಗಿದೆ.

ನವೆಂಬರ್‌ಗೆ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಬರೋಬ್ಬರಿ ಎರಡೂವರೆ ವರ್ಷ ಪೂರೈಸಲಿದೆ. ಈ ಸಂದರ್ಭದಲ್ಲಿ ಸಚಿವ ಸ್ಥಾನದ ಆಕಾಂಕ್ಷಿಗಳಿಗೆ ಮಂತ್ರಿ ಸ್ಥಾನವನ್ನ ನೀಡುವುದು ಅನಿವಾರ್ಯವಾಗಿದೆ.

# ಸಚಿವ ಸ್ಥಾನ ತ್ಯಾಗ ಮಾಡಬೇಕಾಗಿ ಬಂದ್ರೆ ಪಕ್ಷದ ಜವಾಬ್ದಾರಿ ವಹಿಸಿಕೊಳ್ಳಿ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಎಲ್ಲ ಸಚಿವರ ರಿಪೋರ್ಟ್ ಕಾರ್ಡ್ ಪಕ್ಷದ ಹೈಕಮಾಂಡ್ ಬಳಿ ಇದೆ. ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದೆ. ಹಾಗಾಗಿ, ಮೊದಲು ನಿಮ್ಮ ಕಾರ್ಯವೈಖರಿ ಬದಲಿಸಿಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚ್ಯವಾಗಿ ಸಂಪುಟ ಸಹೋದ್ಯೋಗಿಗಳಿಗೆ ಹೇಳಿದ್ದಾರೆ.

ಅಲ್ಲದೆ, ಸಚಿವ ಸ್ಥಾನ ತ್ಯಾಗ ಮಾಡಬೇಕಾದ ಸಂದರ್ಭ ಬಂದಲ್ಲಿ, ಪಕ್ಷದ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ ಎಂದೂ ಹೇಳಿದ್ದಾರೆನ್ನಲಾಗಿದೆ. 50 ಕೋಟಿ ರೂ. ಬಿಡುಗಡೆಯಾದರೂ ವಿವಿಧ ಕಾಮಗಾರಿಗಳ ಸರಿಯಾದ ಕಾರ್ಯಾದೇಶಗಳು ಆಗಿಲ್ಲ ಎಂಬ ದೂರುಗಳಿವೆ. ಶಾಸಕರು ಪದೇಪದೇ ಅಸಮಾಧಾನ ಹೊರಹಾಕುತ್ತಿದ್ದಾರೆ. ಹಾಗಾಗಿ, ಸಚಿವರು ತಮ್ಮ ಕಾರ್ಯವೈಖರಿ ಬದಲಿಸಿಕೊಳ್ಳಬೇಕು ಎಂದು ಸಚಿವರಿಗೆ ಚುರುಕು ಮುಟ್ಟಿಸಿದರು ಎನ್ನಲಾಗಿದೆ. ಎಷ್ಟೋ ಶಾಸಕರು ತಮ್ಮನ್ನು ನೇರವಾಗಿ ಭೇಟಿಯಾಗಿ ನಿಮ್ಮ (ಸಚಿವರ) ನಡೆ ಬಗ್ಗೆ ಬೇಸರ ಹೊರಹಾಕುತ್ತಿದ್ದಾರೆ. ಇನ್ನಾದರೂ ನಿಮ್ಮ ನಡೆ ಬದಲಾಯಿಸಿಕೊಳ್ಳಬೇಕು. ಶಾಸಕರಿಗೇ ಸ್ಪಂದಿಸದಿದ್ದರೆ ಹೇಗೆ?' ಎಂದು ಔತಣಕೂಟದಲ್ಲಿ ಖಾರವಾಗಿ ಕೇಳಿದರು ಎಂದು ಮೂಲಗಳು ತಿಳಿಸಿವೆ.

ಶಾಸಕರ ಪತ್ರಕ್ಕೆ ಆದ್ಯತೆ ನೀಡಿ:

ಶಾಸಕರ ಯಾವುದೇ ಪತ್ರಗಳು ಬಂದರೂ ಆದ್ಯತೆ ನೀಡಬೇಕು. ಕೂಡಲೇ ಸ್ಪಂದಿಸುವ ಕೆಲಸ ಮಾಡಬೇಕು ಎಂದ ಸಿಎಂ, ಸಚಿವ ಸ್ಥಾನ ತ್ಯಾಗ ಮಾಡಬೇಕಾದ ಸಂದರ್ಭ ಬಂದಲ್ಲಿ, ಪಕ್ಷದ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ಈ ಮೊದಲೇ ಹೇಳಿದಂತೆ ಎಲ್ಲ ಸಚಿವರ ಕಾರ್ಯವೈಖರಿ ಬಗ್ಗೆ ಮೌಲ್ಯಮಾಪನ ಆಗಿದೆ ಎಂದೂ ಎಚ್ಚರಿಸಿದ್ದಾರೆ ಎನ್ನಲಾಗಿದೆ.

ಅಗ್ರೆಸ್ಸಿವ್ ಯಾಕಿಲ್ಲ?: ಸಚಿವರಿಗೆ ಸಿಎಂ ಪ್ರಶ್ನೆ

ಪ್ರತಿಪಕ್ಷಗಳು ನಿರಂತರವಾಗಿ ಆರೋಪ ಮಾಡುತ್ತಿದ್ದರೂ ನಿಮ್ಮಿಂದ ಅಷ್ಟೇ ಅಗ್ರೆಸಿವ್ ಉತ್ತರ ಬರುತ್ತಿಲ್ಲ ಯಾಕೆ ಎಂದು ಸಿದ್ದರಾಮಯ್ಯ ಖುದ್ದು ಸಚಿವರಿಗೆ ಪ್ರಶ್ನಿಸಿದರು ಎನ್ನಲಾಗಿದೆ. ಸರ್ಕಾರ ಒಳ್ಳೆಯ ಯೋಜನೆಗಳನ್ನು ಕೊಟ್ಟಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಾಧ್ಯವೇ ಇಲ್ಲವೆಂದು ಪ್ರತಿಪಕ್ಷಗಳು ಆರೋಪ ಮಾಡಿದ್ದವು. ಎರಡು ವರ್ಷಗಳೇ ಕಳೆದರೂ ತಪ್ಪದೆ ಯೋಜನೆ ಮುಂದುವರೆದಿವೆ. ಜತೆಗೆ ಅಭಿವೃದ್ಧಿ ಕೆಲಸಗಳಿಗೆ ಯಾವುದೇ ತೊಂದರೆ ಆಗಿಲ್ಲ. ಎಲ್ಲ ಶಾಸಕರಿಗೂ ಅನುದಾನ ನೀಡಲಾಗುತ್ತಿದೆ. ಇಷ್ಟಾದರೂ ಪ್ರತಿಪಕ್ಷಗಳು ಸರ್ಕಾರದ ವಿರುದ್ಧ ಟೀಕೆ ಮಾಡುತ್ತಿವೆ. ಅದಕ್ಕೆ ಅಷ್ಟೇ ತೀಕ್ಷ್ಣವಾದ ತಿರುಗೇಟು ನಮ್ಮವರಿಂದ ಬರುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಇನ್ನಷ್ಟು ಪರಿಣಾಮಕಾರಿ ಅಟ್ಯಾಕ್ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಪಾಲಿಕೆಗಳ ಚುನಾವಣೆ ಬಗ್ಗೆ ಚರ್ಚಿಸಿದ್ದೇವೆ

ಸ್ಥಳೀಯ ಸಂಸ್ಥೆ, ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ 5 ಪಾಲಿಕೆಗಳ ಚುನಾವಣೆ ಬಗ್ಗೆ ಚರ್ಚಿಸಿದ್ದೇವೆ. ಸಚಿವರ ಮೌಲ್ಯಮಾಪನ, ಸಂಪುಟ ಪುನಾರಚನೆ, ಗುತ್ತಿಗೆದಾರರ ಬಾಕಿ, ಬಿಜೆಪಿ ಬಗ್ಗೆ ಯಾವ ಬಗ್ಗೆಯೂ ಚರ್ಚಿಸಿಲ್ಲ. ಯಾವ ಕ್ರಾಂತಿನೂ ಇಲ್ಲ. ಅದೆಲ್ಲ ಭ್ರಾಂತಿ ಅಷ್ಟೇ.?– ರಾಮಲಿಂಗಾರೆಡ್ಡಿ, ಸಾರಿಗೆ ಸಚಿವ

ಸಚಿವರ ಹಾಜರಿ– ಗೈರು

ಬೇಗ ಬಂದು ಬೇಗ ಹೋದವರು: ಡಿಸಿಎಂ ಡಿ.ಕೆ.ಶಿವಕುಮಾರ್, ಕೃಷಿ ಸಚಿವ ಎನ್. ಚಲುವರಾಯಸ್ವಾಮಿ. ತಡವಾಗಿ ಬಂದವರು: ಡಾ. ಎಚ್.ಸಿ.ಮಹದೇವಪ್ಪ, ಶಿವರಾಜ ತಂಗಡಗಿ. ಅನುಮತಿ ಪಡೆದು ಇಂದಿನ ಸಭೆಗೆ ಗೈರು ಹಾಜರಾದವರು: ಜಮೀರ್ ಅಹಮದ್, ಭೋಸರಾಜು, ಸತೀಶ್ ಜಾರಕಿಹೊಳಿ, ಲಕ್ಷ್ಮಿ ಹೆಬ್ಬಾಳಕರ್, ಮಂಕಾಳ ವೈದ್ಯ.

ಸಭೆಯಲ್ಲಿ ಏನಾಯ್ತು? ನಿರೀಕ್ಷೆಯಂತೆ ಸಂಪುಟ ಪುನಾರಚನೆ ಮುನ್ಸೂಚನೆ? ನವೆಂಬರ್ ಅಂತ್ಯಕ್ಕೆ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ಪುನಾರಚನೆ ಸಾಧ್ಯತೆ

ಸಚಿವರು ಇಲಾಖೆಗಳು ಮತ್ತು ಅಭಿವೃದ್ಧಿ ಕಡೆಗೆ ಗಮನಹರಿಸಬೇಕು?

ಸರ್ಕಾರದ ಯೋಜನೆಗಳು ಮನೆ?ಮನೆಗೆ ತಲುಪುವಂತೆ ಮಾಡಬೇಕು?

ನಾಯಕತ್ವ ವಿಚಾರದಲ್ಲಿ ಯಾವುದೇ ಬಹಿರಂಗ ಹೇಳಿಕೆಗಳನ್ನು ನೀಡಬಾರದು?

ಬಿಬಿಎಂಪಿ, ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಪ್ರತ್ಯೇಕವಾಗಿ ನಡೆಯುವ ಸುಳಿವು, ಆರೆಸ್ಸೆಸ್ ಕುರಿತ ಬಿಜೆಪಿ ಟೀಕೆಗೆ ಎಲ್ಲರೂ ಧ್ವನಿ ಎತ್ತಲು ಸೂಚನೆ?

ಬಿಹಾರ ಚುನಾವಣೆಗೆ ಇನ್ನೊಂದು ಸಚಿವರ ತಂಡ ಕೈಜೋಡಿಸಬೇಕು

# ಮತ ಕಳವು ಆರೋಪದ ಬಗ್ಗೆ ಎಸ್‌ಐಟಿ ರಚನೆಗೆ ಸೂಚಿಸಲಾಗದು : ಸುಪ್ರೀಂ ಕೋರ್ಟ್

ನವದೆಹಲಿ: ಕರ್ನಾಟಕದ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಮಹದೇವಪುರ ಮತ್ತು ಕಲಬುರಗಿ ಜಿಲ್ಲೆಯ ಆಳಂದ ವಿಧಾನಸಭೆ ಕ್ಷೇತ್ರ ಸೇರಿದಂತೆ ದೇಶದ ವಿವಿಧೆಡೆ ನಡೆದಿದೆ ಎನ್ನಲಾದ ಮತ ಕಳವು ಆರೋಪಕ್ಕೆ ಸಂಬಂಧಿಸಿ ನಿವೃತ್ತ ಹೈಕೋರ್ಟ್ ನ್ಯಾಯಮೂರ್ತಿ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಲು ಸುಪ್ರೀಂ ಕೋರ್ಟ್ ಸೋಮವಾರ ನಿರಾಕರಿಸಿದೆ.ಎಸ್‌ಐಟಿ ರಚಿಸಲು ಸೂಚಿಸುವಂತೆ ಸುಪ್ರೀಂ ಕೋರ್ಟ್ ವಕೀಲ ಮತ್ತು ಕಾಂಗ್ರೆಸ್ ಮುಖಂಡ ರೋಹಿತ್ ಪಾಂಡೆ ಅವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ (ಪಿಐಎಲ್) ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಜಾಯ್ ಮಾಲ್ಯಾ ಬಾಗ್ಚಿ ಅವರ ಪೀಠ ನಡೆಸಿತು.ಇದು ಸಾರ್ವಜನಿಕ ಹಿತಾಸಕ್ತಿಯ ಅರ್ಜಿ ಎಂದು ಹೇಳುತ್ತಿದ್ದೀರಿ. ಇದು ನಿಜವೂ ಇರಬಹುದು. ಆದರೆ, ನಿಮ್ಮ ಕೋರಿಕೆಯನ್ನು ಚುನಾವಣಾ ಆಯೋಗದ ಮುಂದಿಡಿ' ಎಂದು ಪೀಠವು ಹೇಳಿತು. ಇದಕ್ಕೆ ಪ್ರತಿಕ್ರಿಯಿಸಿದ ರೋಹಿತ್, 'ನಾವು ಆಯೋಗಕ್ಕೆ ಮನವಿ ಮಾಡಿದ್ದೇವೆ. ಆಯೋಗವು ಅದನ್ನು ಸ್ವೀಕರಿಸಿಯೇ ಇಲ್ಲ' ಎಂದರು.ನಮ್ಮ ಮನವಿಯ ಕುರಿತು ನಿರ್ಧಾರ ತೆಗೆದುಕೊಳ್ಳಲು ಆಯೋಗಕ್ಕೆ ಕಾಲಮಿತಿಯನ್ನು ವಿಧಿಸಿ' ಎಂದು ರೋಹಿತ್ ಪೀಠವನ್ನು ಕೋರಿದರು. ಪೀಠವು ಈ ಮನವಿಯನ್ನೂ ತಿರಸ್ಕರಿಸಿತು. 'ಇಂಥ ಸೂಚನೆ ನೀಡಲು ಸಾಧ್ಯವಿಲ್ಲ' ಎಂದಿತು.ಮತ ಕಳ್ಳತನದ ಕುರಿತು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ನಡೆಸಿದ ಮಾಧ್ಯಮಗೋಷ್ಠಿಗಳನ್ನು ಉಲ್ಲೇಖಿಸಿ ಪಿಐಎಲ್ ಸಲ್ಲಿಸಲಾಗಿತ್ತು. ರಾಹುಲ್ ಅವರು ಉಲ್ಲೇಖಿಸಿದ ಅಂಕಿ–ಅಂಶಗಳನ್ನೂ ಅರ್ಜಿಯಲ್ಲಿ ದಾಖಲಿಸಲಾಗಿತ್ತು.



# ಡೈರೆಕ್ಟಾಗಿ ಹಾಸನಾಂಬಾ ದೇಗುಲದೊಳಗೆ ನುಗ್ಗಿದ ರೇವಣ್ಣ, ಭವಾನಿ!

ಹಾಸನ : ಜೆಡಿಎಸ್ ನಾಯಕ ಎಚ್.ಡಿ.ರೇವಣ್ಣ ಮತ್ತು ಭವಾನಿ ರೇವಣ್ಣ ಕುಟುಂಬಕ್ಕೆ ಹಾಸನದಲ್ಲಿ ಮೇಲಿಂದ ಮೇಲೆ ಏಟುಗಳು ಬಿದ್ದರೂ ಅವರ ದರ್ಪ ದೌಲತ್ತುಗಳು ಮಾತ್ರ ಕೊಂಚವೂ ಕಡಿಮೆಯಾಗಿಲ್ಲ. ಇಂದೂ ಸಹ ಅದನ್ನು ಪುಷ್ಟೀಕರಿಸುವಂತಹ ಘಟನೆಯೊಂದು ನಡೆದಿದ್ದು, ಹಾಸನಾಂಬಾ ದೇಗುಲಕ್ಕೆ (ಊಛಿಚಿಟಿಚಿಟಛಿ ಣಜಟಠಿಟಜ) ಡೈರೆಕ್ಟಾಗಿ ಒಳನುಗ್ಗುವ ಮೂಲಕ ರೇವಣ್ಣ ದಂಪತಿಗಳು ಶಿಷ್ಟಾಚಾರಕ್ಕೆ ಡೋಂಟ್ ಕೇರ್ ಎಂದಿದ್ದಾರೆ.

ಇತ್ತೀಚೆಗಷ್ಟೇ ವಿಐಪಿ, ವಿವಿಐಪಿ ಸೌಲಭ್ಯಗಳನ್ನು ಕಟ್ ಮಾಡಿ ಜಿಲ್ಲಾಡಳಿತ ಆದೇಶ ಹೊರಡಿಸಿತ್ತು. ವಿಐಪಿಗಳಿಗೆಂದೇ ಪ್ರತ್ಯೇಕ ಸಮಯವನ್ನು ನಿಗದಿಪಡಿಸಿತ್ತು.

ಇಂದು ತಮಗೆ ಬೇಕಾದ ಸಮಯದಲ್ಲಿ ರೇವಣ್ಣ ಮತ್ತು ಭವಾನಿ ರೇವಣ್ಣ ದೇವಸ್ಥಾನಕ್ಕೆ ಬಂದಿದ್ದು, ಸಾವಿರ ರೂ. ಟಿಕೆಟ್ ತೆಗೆದುಕೊಂಡು ಡೈರೆಕ್ಟಾಗಿ ದೇಗುಲದ ಒಳಗೆ ನುಗ್ಗಿದ್ದಾರೆ. ಈ ಬಗ್ಗೆ ಸಿಬ್ಬಂದಿ ಆಕ್ಷೇಪ ವ್ಯಕ್ತಪಡಿಸಿದರೂ ಸಹ ಕ್ಯಾರೇ ಎನ್ನದೇ ಅವರಿಗೇ ಅವಾಜ್ ಹಾಕಿ ಒಳಗೆ ನುಗ್ಗಿ ಸುಮಾರು ಅರ್ಧ ತಾಸು ಕಾಲ ಗರ್ಭಗುಡಿಯ ಎದುರಿಗೇ



ಕಳೆದಿದ್ದಾರೆನ್ನಲಾಗಿದೆ.

ಕೇವಲ ಒಂದು ವರ್ಷದ ಕೆಳಗೆ ರೇವಣ್ಣ ಕುಟುಂಬದ ಮೂವರೂ ಸಹ ಜೈಲು ವಾಸ ಕಂಡಿದ್ದರೆ , ಭವಾನಿ ರೇವಣ್ಣ ಬಂಧ'ನ ಭೀತಿಯಿಂದಾಗಿ ತಲೆ ಮರೆಸಿಕೊಂಡಿದ್ದರು.

ಈಗಲೂ ಸಹ ಪುತ್ರ ಪ್ರಜ್ವಲ್ ರೇವಣ್ಣ ಲೈಂಗಿಕ ಅತ್ಯಾಚಾರ, ಸರಣಿ ಅತ್ಯಾಚಾರದ ಆರೋಪದ ಮೇಲೆ ಜೀವನ ಪರ್ಯಂತ ಜೈಲು ಶಿಕ್ಷೆ ಪಡೆದು ಪರಪ್ಪನ ಅಗ್ರಹರಾದ ಕಂಬಿ ಎಣಿಸುತ್ತಿದ್ದರೆ ಮತ್ತೊಬ್ಬ ಪುತ್ರ ಸೂರಜ್ ರೇವಣ್ಣ ಸಲಿಂಗ ಕಾಮದ ಆರೋಪದ ಮೇಲೆ ಜೈಲು ಕಂಡು ಜಾಮೀನಿನ ಮೇಲೆ ಹೊರಗೆ ಬಂದಿದ್ದಾನೆ. ಇನ್ನು ಸ್ವತಃ ಎಚ್.ಡಿ. ರೇವಣ್ಣ ಅತ್ಯಾಚಾರ ಮತ್ತು ಅಪಹರಣದ ಆರೋಪದ ಮೇಲೆ ಜೈಲು ಕಂಡು ಜಾಮೀನಿನ ಮೇಲೆ ಹೊರಗಿದ್ದಾರೆ.

ತಮ್ಮ ದರ್ಪದ ವರ್ತನೆಯಿಂದ ರೇವಣ್ಣ ದಂಪತಿಗಳು ಹೆಸರು ಮಾಡುತ್ತಿರುವುದು ಇದೇ ಮೊದಲೇನಲ್ಲ. ಈ ಹಿಂದೆಯೂ ಸಹ ರೇವಣ್ಣ ಮತ್ತು ಭವಾನಿ ರೇವಣ್ಣ ಹಾಸನದಲ್ಲಿ ಪೊಲೀಸ್ ಅಧಿಕಾರಿಗಳಿಗೆ ಸಾರ್ವಜನಿಕವಾಗಿ ಹೀನಾಯಮಾನವಾಗಿ ಬೈದು ಕುಪ್ರಸಿದ್ಧಿಗಳಿಸಿದ್ದರು. ಹಿಂದೊಮ್ಮೆ ಭವಾನಿ ರೇವಣ್ಣ ತಮ್ಮ ಕಾರಿಗೆ ದ್ವಿಚಕ್ರ ವಾಹನದವನೊಬ್ಬ ಗುದ್ದಿದ ಎಂಬ ಕಾರಣಕ್ಕೆ ವಾಚಾಮಗೋಚರ ಬೈದು ನಿಂದಿಸಿದ್ದ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು.

ಬಳಿಕ ಆ ದುಬಾರಿ ಕಾರು ಪೀಣ್ಯದ ಕಾರ್ಖಾನೆ ಮಾಲಿಕರೊಬ್ಬರ ಹೆಸರಿನಲ್ಲಿರುವುದು ಗೊತ್ತಾಗಿತ್ತು.

ರೇವಣ್ಣ ಕುಟುಂಬವಿಡೀ ರಾಜಕಾರಣದಲ್ಲಿ ತೊಡಗಿಸಿಕೊಂಡಿರುವ ಹಾಗೂ ಪ್ರತಿಯೊಬ್ಬರೂ ಸಹ ಕ್ರಿಮಿನಲ್ ಪ್ರಕರಣಗಳನ್ನು ಎದುರಿಸುತ್ತಿರುವ ಕುಟುಂಬ ಎಂಬ ಅಪಖ್ಯಾತಿಗೂ ಸಹ ಪಾತ್ರವಾಗಿದೆ.

ಈ ಹಿಂದೆ ಜಿಲ್ಲಾಧಿಕಾರಿಯನ್ನೂ ಸಹ ಕೀಳು ಮಟ್ಟದ ಭಾಷೆಯಲ್ಲಿ ರೇವಣ್ಣ ನಿಂದಿಸಿದ್ದು ಸುದ್ದಿಯಾಗಿತ್ತು. ಬಳಿಕ ರೇವಣ್ಣ ಅಂಡ್ ಫ್ಯಾಮಿಲಿ ಜೈಲು ಸೇರಿದಾಗಿ ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿ ಅವರು ತಾವು ಮಾಡಿದ ಕರ್ಮಕ್ಕೆ ಪ್ರತಿಫಲ ಪಡೆಯುತ್ತಿದ್ದಾರೆ ಎಂದು ಕಟುವಾಗಿ ಟೀಕಿಸಿದ್ದರು.

## ಬೆಳ್ಳಂಬೆಳಗ್ಗೆ ಭ್ರಷ್ಟ ಅಧಿಕಾರಿಗಳಿಗೆ ಶಾಕ್ : ರಾಜ್ಯದ ಹಲವು ಕಡೆ ಲೋಕಾಯುಕ್ತ ದಾಳಿ

ಬೆಂಗಳೂರು : ಆದಾಯ ಮೀರಿ ಆಸ್ತಿ ಗಳಿಕೆ ಸಂಬಂಧ ದಾವಣಗೆರೆ, ಚಿತ್ರದುರ್ಗ ಸೇರಿದಂತೆ ಹಲವು ಕಡೆ ಇಂದು ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ದಾವಣಗೆರೆಯಲ್ಲಿ ಇಬ್ಬರು ಅಧಿಕಾರಿಗಳ ಮೇಲೆ ಲೋಕಾಯಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಕೆಆರ್ ಐಡಿಎಲ್ ಸಹಾಯಕ ಇಂಜಿನಿಯರ್ ಜಗದೀಶ್ ನಾಯ್ಕ್, ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಎಸ್ ಡಿಎ ನಡುವಿನ ಮನೆ ಇಬ್ಬರು ಅಧಿಕಾರಿಗಳ ಸೇರಿದ 10 ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.

ಚಿತ್ರದುರ್ಗದಲ್ಲಿ ಬೆಳ್ಳಂಬೆಳಗ್ಗೆ ಅಧಿಕಾರಿಗಳಿಗೆ ಲೋಕಾಯುಕ್ತ ಶಾಕ್ ನೀಡಿದ್ದು, ಚಿತ್ರದುರ್ಗದ ಹಲವು ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಕೃಷಿ ಇಲಾಖೆ ಎಡಿ ಚಂದ್ರಕಾಂತ್ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ. ಎರಡು ಮನೆ, ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ.

ಚಿತ್ರದುರ್ಗದ ತರಳಬಾಳು ನಗರದಲ್ಲಿರುವ ಅಧಿಕಾರಿ ಚಂದ್ರಕಾಂತ್ ಮನೆ ಮೇಲೆ ದಾಳಿ ನಡೆಸಲಾಗಿದ್ದು, ಕೃಷಿ ಇಲಾಖೆ ಕಚೇರಿಯಲ್ಲಿ ಪರಿಶೀಲನೆ ನಡೆಸಲಾಗಿದೆ. ಹೊಳಲ್ಕೆರೆ ತಾಲೂಕಿನ ಟಿ. ನುಲೇನೂರು ಗ್ರಾಮದ ಮನೆಯಲ್ಲೂ ಶೋಧ ನಡೆಸಲಾಗಿದೆ. ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.




## ತಮಿಳುನಾಡಿನಲ್ಲಿ ಕೈಗೊಂಡಂತೆ ಆರ್‌ಎಸ್‌ಎಸ್ ವಿರುದ್ಧ ಕರ್ನಾಟಕದಲ್ಲಿ ಕ್ರಮ: ಸಿಎಂ ಸಿದ್ದರಾಮಯ್ಯ ಘೋಷಣೆ

ಬಾಗಲಕೋಟೆ: ತಮಿಳುನಾಡಿನಲ್ಲಿ ಕೈಗೊಂಡಂತೆ ರಾಷ್ಟ್ರೀಯ ಸ್ವಯಂ ಸೇವಾ ಸಂಘ ) ವಿರುದ್ಧ ಕರ್ನಾಟಕದಲ್ಲಿ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಘೋಷಿಸಿದ್ದಾರೆ.

ರಾಜ್ಯದ ಸರ್ಕಾರಿ ಸ್ಥಳ, ಮುಜುರಾಯಿ ದೇವಸ್ಥಾನಗಳಲ್ಲಿ ಆರ್‌ಎಸ್‌ಎಸ್‌ನ ಎಲ್ಲಾ ಚಟುವಟಿಕೆಗಳನ್ನು ರದ್ದುಪಡಿಸುವಂತೆ ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿದ್ದರು.

ಸರ್ಕಾರದ ಸ್ಥಳಗಳಲ್ಲಿ ಆರ್‌ಎಸ್‌ಎಸ್‌ನ ಎಲ್ಲ ಚಟುವಟಿಕೆಗಳನ್ನು ನಿಷೇಧಿಸುವಂತೆ ಮನವಿ ಮಾಡಿದ್ದಾರೆ. ಈ ಪ್ರತ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕಳುಹಿಸಿ ಪರಿಶೀಲಿಸಿ ಕೂಡಲೇ ಅಗತ್ಯ ಕ್ರಮ ವಹಿಸಿ ಎಂದು ಸೂಚಿಸಿದ್ದರು.

ಈ ಬಗ್ಗೆ ಬಾಗಲಕೋಟೆ ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ಬಂಡಿಗಣಿ ಗ್ರಾಮದಲ್ಲಿ ಮಾಧ್ಯಮಗಳಿಗೆ ಬಹಿರಂಗವಾಗಿ ಮೊದಲ ಬಾರಿಗೆ ಪ್ರತಿಕ್ರಿಯಿಸಿರುವ ಸಿದ್ದರಾಮಯ್ಯ, ಖಖಖ ಚಟುವಟಿಕೆ ನಿಷೇಧ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಪತ್ರ ಬರೆದಿದ್ದಾರೆ. ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸಿಎಸ್? ಗೆ ಸೂಚಿಸಿದ್ದೇನೆ. ತಮಿಳುನಾಡಿನಲ್ಲಿ ಯಾವ ರೀತಿ ಕ್ರಮ ಕೈಗೊಂಡಿದ್ದಾರೋ ಅದೇ ರೀತಿ ಕ್ರಮ ಕೈಗೊಳ್ಳಿ ಅಂತಾ ಸಿಎಸ್? ಗೆ ಸೂಚಿಸಿದ್ದೇನೆ ಎಂದು ಸ್ಪಷ್ಟಪಡಿಸಿದರು.




## ಮೈತುಂಬಾ ಸಾಲ – ರೈಲಿಗೆ ತಲೆಕೊಟ್ಟು ಜೀವತೆತ್ತ ಮಾಜಿ ಶಾಸಕರ ಪುತ್ರ!

ಉಡುಪಿ : ಉಡುಪಿಯ ಮಾಜಿ ಶಾಸಕ ದಿ.ಗೋಪಾಲ ಭಂಡಾರಿ ಅವರ ಪುತ್ರ ಸುದೀಪ್ ಭಂಡಾರಿ (40) ಸೂಸೈಡ್ ಗೆ ಶರಣಾಗಿದ್ದಾರೆ.

ತಡರಾತ್ರಿ ಬಾರಕೂರು ರೈಲ್ವೆ ಹಳಿಯ ಬಳಿ ಗೋಪಾಲ್ ಭಂಡಾರಿ ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ಬೆಳಕಿಗೆ ಬಂದಿದೆ.

ಸುದೀಪ್ ಹೆಬ್ರಿಯ ನಿವಾಸಿಯಾಗಿದ್ದು, ಆತ್ಮಹತ್ಯೆಗೆ ನಿಖರವಾದ ಕಾರಣ ಇನ್ನಷ್ಟೇ ತಿಳಿಯಬೇಕಿದೆ. ಘಟನಾ ಸ್ಥಳಕ್ಕೆ ಸ್ಥಳೀಯ ಪೊಲೀಸರು ಬಂದು ಪರಿಶೀಲನೆ ನಡೆಸಿದ್ದಾರೆ.

ಮೃತದೇಹವನ್ನು ಶವಪರೀಕ್ಷೆಗೆ ರವಾನೆ ಮಾಡಲಾಗಿದ್ದು, ಸುದೀಪ್ ಭಂಡಾರಿ ಅವರ ಕಾಲ್ ಡಿಟೇಲ್ಸ್ ಹಾಗೂ ವೈಯಕ್ತಿಕ ಸಂಬಂಧಗಳ ಬಗ್ಗೆ ಮಾಹಿತಿ ಕಲೆಹಾಕಲಾಗಿದೆ. ಆರ್ಥಿಕ ವ್ಯವಹಾರದ ಬಗ್ಗೆಯೂ ಪರಿಶೀಲನೆ ನಡೆದಿದೆ. ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ.

ಸುದೀಪ್ ಯಾವುದೊ ವ್ಯವಹಾರಗೆ ಮುಂದಾಗಿ ಅಪಾರ ಸಾಲ ಮಾಡಿಕೊಂಡಿದ್ದರು. ಸಾಲದ ಸುಳಿಯಲ್ಲಿ ಸಿಲುಕಿದ ಕಾರಣ ಅವರ ವೈಯಕ್ತಿಕ ಸಂಬಂಧ ಹದಗೆಟ್ಟಿತ್ತು. ಇದ್ರಿಂದ ಸಾಕಷ್ಟು ಮನನೊಂದಿದ್ದರು ಎಂದು ಹೇಳಲಾಗಿದೆ.ಸದ್ಯ ಕುಟುಂಬದಲ್ಲಿ ನೀರವ ಮೌನ ಆವರಿಸಿದೆ. ಇವತ್ತೇ ಅಂತ್ಯಕ್ರಿಯೆ ನಡೆಯಲಿದೆ ಎಂಬ ಮಾಹಿತಿ ಲಭ್ಯವಾಗಿದೆ.



## ಇಂದು ವಿಜಯಪುರ ಜಿಲ್ಲೆ ಚಿಕ್ಕಸಿಂದಗಿ ಗ್ರಾಮದಲ್ಲಿ ನಟ ರಾಜು ತಾಳಿಕೋಟೆ ಅಂತ್ಯಕ್ರಿಯೆ

ವಿಜಯಪುರ: ಸ್ಯಾಂಡಲ್ ವುಡ್ ನಟ, ಹಿರಿಯ ರಂಗಕರ್ಮಿ ರಾಜು ತಾಳಿಕೋಟೆ(60) ಸೋಮವಾರ ಹೃದಯಾಘಾತದಿಂದ ನಿಧನರಾಗಿದ್ದಾರೆ.

ಹೆಬ್ರಿಯ ಕಬ್ಬಿನಾಲೆಯಲ್ಲಿ ಚಿತ್ರೀಕರಣದ ವೇಳೆ ಹೃದಯಾಘಾತದಿಂದ ನಿಧನರಾಗಿದ್ದಾರೆ. ವಿಜಯಪುರ ಜಿಲ್ಲೆ ಸಿಂದಗಿ ತಾಲೂಕಿನ ತಾಳಿಕೋ ಟೆಯವರಾದ ರಾಜು ತಾಳಿಕೋಟೆ(ರಾಜೇಸಾಬ್ ಮುಕ್ತುಮ್ ಸಾಬ್) ಅವರು ನಟ ಶೈನ್ ಶೆಟ್ಟಿ ಅವರ 'ಶಂಕರಾಭರಣ' ಸಿನಿಮಾ ಚಿತ್ರೀಕರಣಕ್ಕಾಗಿ ಉಡುಪಿಗೆ ಆಗಮಿಸಿದ್ದರು.



ಭಾನುವಾರ ತಡರಾತ್ರಿ ಉಸಿರಾಟ ತೊಂದರೆ ಕಾಣಿಸಿಕೊ ಂಡ ಹಿನ್ನೆಲೆಯಲ್ಲಿ ಹೆಬ್ರಿ ಆಸ್ಪತ್ರೆಗೆ ಅವರನ್ನು ದಾಖಲಿಸಿ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮಣಿಪಾಲದ ಕೆಎಂಸಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ತುರ್ತಾಗಿ ಅವರಿಗೆ ಆಂಜಿಯೋಪ್ಲಾಸ್ಟಿ ಮಾಡಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಸಂಜೆ ಕೊನೆಯುಸಿರೆಳೆದಿದ್ದಾರೆ. ಪಾರ್ಥೀವ ಶರೀರವನ್ನು ಕುಟುಂಬದವರಿಗೆ ಹಸ್ತಾಂತರಿಸಲಾಗಿದೆ.

ಮಂಗಳವಾರ ಬೆಳಗ್ಗೆ 7ರಿಂದ 8 ಗಂಟೆಯವರೆಗೆ ಧಾರವಾಡ ರಂಗಾಯಣದ ಆವರಣದಲ್ಲಿ ಅವರ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗುವುದು. ಮಧ್ಯಾಹ್ನ 2 ಗಂಟೆಗೆ ವಿಜಯಪುರ ಜಿಲ್ಲೆ ಸಿಂದಗಿ ತಾಲೂಕಿನ ಚಿಕ್ಕ ಸಿಂದಗಿ ಗ್ರಾಮದಲ್ಲಿರುವ ತೋಟದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುವುದು.

## ಯಾದಗಿರಿಯಲ್ಲಿ ಎದ್ದೇಳು ಕನ್ನಡಿಗ,ಕೆ ಆರ್ ಎಸ್ ಪಕ್ಷ ಸೇರು ಬಾ ಅಭಿಯಾನ ಯಶಸ್ವಿ.

### ನವಂಬರ್ ಒಂದಕ್ಕೆ ಬೆಂಗಳೂರುನಲ್ಲಿ ಪಕ್ಷದ ಬೃಹತ್ ಸಮಾವೇಶಕ್ಕೆ ಕರೆ.



ಸಕ್ಕರೆನಾಡು: ಯಾದಗಿರಿ :– ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ವತಿಯಿಂದ ಯಾದಗಿರಿ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದ ಎದ್ದೇಳು ಕನ್ನಡಿಗ ಕೆ ಆರ್ ಎಸ್ ಪಕ್ಷ ಸೇರು ಬಾ ಅಭಿಯಾನ ಯಶಸ್ವಿಯಾಗಿ ನಡೆಯಿತು. ನಗರದ ಕೇಂದ್ರ ಬಸ್ ನಲ್ದಾಣ ದ ಮೂಲಕ ಅಭಿಯಾನಕ್ಕೆ ಚಾಲನೆ ಶಾಸ್ತ್ರಿ ವೃತ್ತ, ಅಂಬೇಡ್ಕರ್ ವೃತ್ತ,ಮಹಾತ್ಮ ಗಾಂಧಿ ವೃತ್ತದ ವರೆಗೆ ಪಾದಯಾತ್ರೆ ಮಾಡಿ ಅಭಿಯಾನದ ಕುರಿತು ಜನ ಜಾಗೃತಿ,ಹಾಗೂ ಪಕ್ಷದ ಸದಸ್ಯತ್ವ ಮಾಡುವ ಮೂಲಕ ದೇಣಿಗೆ ಸಂಗ್ರಹಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೆ ಆರ್ ಎಸ್ ಪಕ್ಷದ ರಾಜ್ಯ ರೈತ ಘಟಕದ ಅಧ್ಯಕ್ಷ ಜೋಗನಹಳ್ಳಿ ಗುರುಮೂರ್ತಿ ಅವರು ಇತ್ತೀಚಿನ ದಿನಗಳಲ್ಲಿ ಕನ್ನಡಿಗರು ಅನುಭವಿಸುತ್ತಿರುವ ನೋವುಗಳಿಗೆ,ಕಷ್ಟ ಕಾರ್ಪಣ್ಯಗಳಿಗೆ ನಮ್ಮನ್ನು ಆಳುತ್ತಿರುವ ಎಲ್ಲಾ ರಾಜಕೀಯ ಪಕ್ಷಗಳು ನೇರವಾಗಿ ಕಾರಣ.ಅವರವರ ಸ್ವಾರ್ಥದ ಮತ್ತು ಕುಟುಂಬದ ರಾಜಕಾರಣದಲ್ಲಿ ರಾಜ್ಯದ ಮತದಾರರನ್ನು ಮೂರ್ಖರನ್ನಾಗಿ ಮಾಡಿ ಜನರನ್ನು ವಂಚಿಸುತ್ತಿದ್ದಾರೆ

ಜನಪರವಾದ ಆಡಳಿತ ನಡೆಸಬೇಕಾದ ಪಕ್ಷಗಳು ಜಾತಿ ರಾಜಕಾರಣ, ಹಣಬಲದ ರಾಜಕಾರಣದಲ್ಲಿ ತೊಡಗಿಸಿಕೊಂಡಿವೆ ಹಾಗಾಗಿ ನಮ್ಮ ಪಕ್ಷವು ಕನ್ನಡ ನಾಡಿನ ನೆಲ,ಜಲ,ಗಡಿ ಭಾಷೆಯ ಉಳಿವಿಗಾಗಿ ಮತ್ತು ಕನ್ನಡಿಗರಿಗೆ ಉದ್ಯೋಗದಲ್ಲಿ ಹೆಚ್ಚಿನ ಆದ್ಯತೆ ನೀಡುವಿಕೆಗಾಗಿ ಒತ್ತಾಯಿಸಿ ಮುಂದಿನ ನವಂಬರ್ ತಿಂಗಳಲ್ಲಿ ಒಂದು ದೊಡ್ಡ ಸಮಾವೇಶ ಆಯೋಜಿಸಲಾಗುತ್ತಿದ್ದು ಸಮಸ್ತ ಕನ್ನಡಿಗರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಕೆ ಆರ್ ಎಸ್ ಪಕ್ಷದ ರಾಜ್ಯ ರೈತ ಘಟಕದ ಕಾರ್ಯದರ್ಶಿ ನರುಪಾದಿ ಕೆ ಗೋಮರ್ಸಿ ಅವರು ಮಾತನಾಡಿ ರಾಜ್ಯದಲ್ಲಿ ರೈತರಿಗೆ,ಮಹಿಳೆಯರಿಗೆ,ವಿದ್ಯಾರ್ಥಿಗಳಿಗೆ,ಕೃಷಿ ಕಾರ್ಮಿಕರಿಗೆ ಉತ್ತಮವಾದ ಜೀವನ ನಿರ್ವಹಣೆಗೆ ಅನುನಕೂಲದ ವಾತಾವರಣ ನಿರ್ಮಾಣವಾಗಿದೆ

ಈ ಎಲ್ಲಾ ಅವ್ಯವಸ್ಥೆಗಳನ್ನು ವಿರೋಧಿಸಿ ಪ್ರತಿಯೊಬ್ಬರು ಉತ್ತಮವಾದ ಜನ ಜೀವನ ಮಾಡುವಂತೆ ಹಾಗೂ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹಲವಾರು ಯೋಜನೆಗಳು ಜನರಿಗೆ ತಲುಪಿಸಿ ಕನ್ನಡಿಗರನ್ನು ಜಾಗೃತಿ ಮೂಡಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದು ಇದಕ್ಕೆ ಕನ್ನಡಪರ,ರೈತಪರ,ಪ್ರಗತಿಪರ ಸಂಘಟನೆಗಳ ಮುಖಂಡರು,ನಾಯಕರು ಬೆಂಬಲಿಸಬೇಕೆಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಪಕ್ಷದ ರಾಜ್ಯ ಸಂಘಟನಾ ಕಾರ್ಯದರ್ಶಿ ಆನಂದ್, ಪ್ರಸನ್ನ ಕುಮಾರ್,ರೈತ ಘಟಕದ ಕಾರ್ಯದರ್ಶಿ, ಶಿವರಾಜ್ ಕಪಗಲ್,ಜಿಲ್ಲಾಧ್ಯಕ್ಷ ಜಗನ್ನಾಥ,ಪ್ರಧಾನ ಕಾರ್ಯದರ್ಶಿ ನಜಲಿಂಗಪ್ಪ, ಕಾರ್ಯದರ್ಶಿ,ಬಸವರಾಜ, ಯುವ ಘಟಕದ ಕಾರ್ಯದರ್ಶಿ ಶಾಂತಕುಮಾರ್, ರೈತ ಘಟಕದ ಜಿಲ್ಲಾಧ್ಯಕ್ಷ ಜಯವಂತ , ಕಾರ್ಯದರ್ಶಿ ಸೋಮನಗೌಡ,ಹನುಮಂತ,ಬಸಲಿಂಗಪ್ಪ ದುಪ್ಪಳ್ಳಿ,ಹನುಮಂತ ಸುರಪುರ,ನರಸಿಂಹ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಸಮೀಕ್ಷೆಗೆ ಮಾಹಿತಿ ನಿರಾಕರಿಸಿದರೆ ಮುಚ್ಚಳಿಕೆ ಕಡ್ಡಾಯ

ಬೆಂಗಳೂರು: ಸರಕಾರದ ಮಹತ್ವಾಕಾಂಕ್ಷಿ ಜಾತಿಗಣತಿ (ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ)ಯಿಂದ ದೂರ ಉಳಿಯುವವರಿಗೆ "ದೃಢೀಕರಣ ಪತ್ರ' ಕಡ್ಡಾಯಗೊಳಿಸಲು ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಮುಂದಾಗಿದೆ.

ಜಾತಿ ಗಣತಿಯಿಂದ ದಿನದಿಂದ ದಿನಕ್ಕೆ ದೂರ ಉಳಿಯುವವರ ಸಂಖ್ಯೆ ಹೆಚ್ಚುತ್ತಲೇ ಇದೆ.ಇದರಿಂದ ಪ್ರತೀ ಮನೆಗೆ ಭೇಟಿ ನೀಡಿದ್ದರೂ ಸಮೀಕ್ಷೆ ಅಪೂರ್ಣ ಎಂದು ಬಿಂಬಿಸುವ ಸಾಧ್ಯತೆಗಳಿವೆ. ಈ ಹಿನ್ನೆಲೆಯಲ್ಲಿ ನಿರಾಕರಿಸಿದವರ ಮನೆಗೆ ಮತ್ತೊಂದು ಸುತ್ತು ಗಣತಿದಾರರು ಭೇಟಿ ನೀಡಿ ಸಹಿಯೊಂದಿಗಿನ ದೃಢೀಕರಣ ಪತ್ರ ಪಡೆಯಲಿದ್ದಾರೆ.

ಈ ಮೊದಲೇ ಮಾಹಿತಿ ನೀಡಲು ನಿರಾಕರಿಸಿದಲ್ಲಿ, ಅಂತಹವರಿಂದ ಲಿಖೀತವಾಗಿ ಸ್ಪಷ್ಟೀಕರಣ ಪಡೆಯು?ವಂತೆ ಗಣತಿದಾರರಿಗೆ ಸೂಚಿಸಲಾಗಿತ್ತು. ಆದರೆ ಅದು ಕಡ್ಡಾಯ ಆಗಿರಲಿಲ್ಲ. ಹಾಗಾಗಿ ಬಹುತೇಕ ಕಡೆಗಳಲ್ಲಿ ಸಮೀಕ್ಷೆಯಲ್ಲಿ ಭಾಗವಹಿಸಲು ನಿರಾಕರಿಸುವುದರ ಜತೆಗೆ ಬರೆದುಕೊಡಲಿಕ್ಕೂ ಆಗುವುದಿಲ್ಲ ಎಂದು ಹೇಳಿದ್ದಾರೆ. ಅಂಥ ಯುಎಚ್‌ಐಡಿಗಳನ್ನು ಗಣತಿದಾರರೇ "ಡಿಲೀಟ್' ಮಾಡಿದ್ದಾರೆ.

ಸಮೀಕ್ಷೆ ಪ್ರಕ್ರಿಯೆ ಮುಗಿದ ಬಳಿಕ ಗಣತಿದಾರರಿಗೆ ನೀಡಿದ್ದ ಯುಎಚ್‌ಐಡಿ ಪಟ್ಟಿಯೊಂದಿಗೆ ಗಣತಿಯನ್ನು ತಾಳೆ ಹಾಕಲಾಗುತ್ತದೆ. ಅದರಲ್ಲಿ ಕೈಬಿಟ್ಟ ಮನೆಗಳಿಗೆ ಪುನಃ ಭೇಟಿ ನೀಡಿ ಅವರಿಂದ ಮುಚ್ಚಳಿಕೆ ಅಥವಾ ದೃಢೀಕರಣ ಪತ್ರ ಪಡೆಯಲಾಗುವುದು. ಇದರಿಂದ ಸಮೀಕ್ಷೆ ನೂರಕ್ಕೆ ನೂರರಷ್ಟು ಆದಂತಾಗಲಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.ಜನರ ಅಭಿಪ್ರಾಯವೂ ಬದಲಾಗಬಹುದುಸಮೀಕ್ಷೆಯಲ್ಲಿ ಮಾಹಿತಿ ನೀಡಲು ನಿರಾಕರಿಸಿದವರಿಂದ ದೃಢೀಕರಣ ಪತ್ರ ಪಡೆಯುತ್ತೇವೆ. ಆದರೆ ಸದ್ಯಕ್ಕಿಲ್ಲ. ಇಡೀ ಸಮೀಕ್ಷೆ ಪೂರ್ಣಗೊಂಡ ಅನಂತರ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು. ಅಷ್ಟರಲ್ಲಿ ಜನರ ಅಭಿಪ್ರಾಯವೂ ಬದಲಾಗಬಹುದು. ಆಗ ಮಾಹಿತಿ ನೀಡಲು ಮುಂದಾಗಬಹುದು.–ಡಾ। ಕೆ.ಎ. ದಯಾನಂದ್, ಸದಸ್ಯ ಕಾರ್ಯದರ್ಶಿ, ರಾಜ್ಯ ಹಿಂದುಳಿದ ವರ್ಗಗಳ ಆಯೋಗ



# ದಾಖಲಾತಿಗಳನ್ನು ಸಲ್ಲಿಸಿ, ಪೌತಿ ಖಾತೆಗಳನ್ನು ಮಾಡಿಸಿಕೊಳ್ಳಿ: ಶಾಸಕ ರಮೇಶ ಬಂಡಿಸಿದ್ದೇಗೌಡ



ಸಕ್ಕರೆನಾಡು: ಮಂಡ್ಯ: ತಾಲೂಕಿನ ಕೊತ್ತತ್ತಿ ಒಂದನೇ ಹಾಗೂ ಎರಡನೇ ವೃತ್ತದ ವ್ಯಾಪ್ತಿಯಲ್ಲಿ ಸುಮಾರು 12,000 ಪೌತಿಖಾತೆಗಳು ಬಾಕಿ ಇವೆ ಎಂದು ಚೆಸ್ಕಾಂ ಅಧ್ಯಕ್ಷ ಹಾಗೂ ಶಾಸಕ ಎ.ಬಿ.ರಮೇಶ ಬಂಡಿಸಿದ್ದೇಗೌಡ ತಿಳಿಸಿದರು.

ತಾಲೂಕಿನ ಹಳುವಾಡಿ ಶ್ರೀನಿವಾಸ ಸಮುದಾಯ ಭವನದಲ್ಲಿ ಜಿಲ್ಲಾ ಪಂಚಾಯತ್, ತಾಲೂಕು ಆಡಳಿತ ಮತ್ತು ತಾಲೂಕು ಪಂಚಾಯಿತಿ ವತಿಯಿಂದ ಏರ್ಪಡಿಸಿದ್ದ ತಗ್ಗಹಳ್ಳಿ ಹಾಗೂ ಹಳುವಾಡಿ ಗ್ರಾಮ ಪಂಚಾಯಿತಿ ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತ ನಾಡಿದರು.

ಪೌತಿ ಖಾತೆ ಆಂದೋಲನ ಪೂರ್ಣ ಪ್ರಮಾಣದಲ್ಲಿ ಆಗಬೇಕು. ತಮ್ಮ ದಾಖಲಾತಿಗಳನ್ನು ಸಲ್ಲಿಸಿ, ಸಮಸ್ಯೆಗಳನ್ನು ಸರಿಪಡಿಸಿಕೊಂಡು ಪೌತಿ ಖಾತೆಗಳನ್ನು ಮಾಡಿಸಿಕೊಳ್ಳಿ ಎಂದು ತಿಳಿಸಿದರು.

ಸರ್ಕಾರದ ಯೋಜನೆಗಳು ಜನಸಾಮಾನ್ಯರಿಗೆ ನೇರವಾಗಿ ತಲುಪಬೇಕು ಎಂದು ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಜನತಾ ದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು ಇಲಾಖೆವಾರು ತಮ್ಮ ಅಹವಾಲುಗಳನ್ನು ಸ್ವೀಕರಿಸಿ ಸಾರ್ವಜನಿಕರ ಹಾಗೂ ರೈತರ ಕುಂದು ಕೊರತೆಗಳನ್ನು ಪರಿಹರಿಸುವ ಕೆಲಸವನ್ನು ಅಧಿಕಾರಿಗಳು ಮಾಡುತ್ತಾರೆ ಎಂದು ತಿಳಿಸಿದರು.

ಸರ್ಕಾರ ನೂತನವಾಗಿ ಹೊಸ ಯೋಜನೆಯನ್ನು ಜಾರಿಗೆ ತರುತ್ತಿದ್ದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೆವಿನ್ಯೂ ಸೈಟ್ ಗಳ ಮಾಲೀಕರಿಗೆ 11ಬಿ ಅನ್ವಯ ಬಿ ಖಾತಾ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ಕಮಿಟಿ ರಚನೆ ಮಾಡಿ ಇನ್ನು 15 ದಿನದಲ್ಲಿ ನೂತನ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಆದೇಶ ಮಾಡಿದೆ ಎಂದು ಹೇಳಿದರು.

ಗ್ರಾಮಠಾಣ ವ್ಯಾಪ್ತಿಯಲ್ಲಿ ಮನೆ ಕಟ್ಟಬೇಕಾದರೆ 30 ಅಡಿ ರಸ್ತೆಗೆ ಜಾಗ ಬಿಟ್ಟು ಮನೆಯಲ್ಲಿ ನಿರ್ಮಾಣ ಮಾಡಬೇಕು.

ಈ ಈ ರೀತಿಯಾಗಿ ಎಲ್ಲವನ್ನು ಕಾನೂನು ವ್ಯಾಪ್ತಿಗೆ ತಂದು ಹೊಸ ಯೋಜನೆ ಜಾರಿಗೆ ತರುತ್ತಿದ್ದಾರೆ ಎಂದು ಹೇಳಿದರು.

ತಹಶೀಲ್ದಾರ್ ವಿಶ್ವನಾಥ್ ಮಾತನಾಡಿ ಅಕ್ಕ ಪಕ್ಕದವರು ಹಾಗೂ ಅಣ್ಣತಮ್ಮಂದಿರು ಒತ್ತುವರಿ ಮಾಡಿಕೊಂಡಿರುವ ಜಮೀನುಗಳನ್ನು ಕಾನೂನು ರೀತಿ ತೆರವುಗೊಳಿಸಬೇಕಾದರೆ ಪೊಲೀಸ್ ರಕ್ಷಣೆ ತೆಗೆದುಕೊಂಡು ಬಿಡಿಸಿ ಕೊಡುತ್ತೇವೆ ಎಂದು ಹೇಳಿದರು.

ಗ್ರಾಮ ಪಂಚಾಯಿತಿಯ ಗ್ರಾಮಠಾಣ ಒಳಗಡೆ ಬರುವ ಆಸ್ತಿಗಳಿಗೆ ಶೇ.100ರಷ್ಟು ಇ –ಸ್ವತ್ತು ಕೊಡಲಾಗುವುದು ಎಂದರು.

ತಾಲೂಕು ಪಂಚಾಯಿತಿ ಇಒ ಲೋಕೇಶ್ ಮೂರ್ತಿ ಮಾತನಾಡಿ ಸರ್ವೆ ನಂಬರ್ ಗಳಲ್ಲಿ ಮನೆ ಕಟ್ಟಿಕೊಂಡಿದ್ದರೆ ಪಂಚಾಯಿತಿ ಖಾತೆಯನ್ನು ಕ್ರಮಬದ್ಧವಾಗಿ ಅಲಿ ಲೇಶನ್ ಮಾಡಿಸಿಕೊಂಡು ಗ್ರಾಮ ಪಂಚಾಯಿತಿ ಖಾತೆಯನ್ನು ಮಾಡಿಸಿಕೊಂಡರೆ ನಿಮಗೆ ದಾಖಲೆಯಾಗಿ ಅವು ಉಳಿಯುತ್ತವೆ ಎಂದು ಹೇಳಿದರು.

ಹಳ್ಳಿಗಳಲ್ಲಿ ರಸ್ತೆ ಸಮಸ್ಯೆಗಳು ಬರುತ್ತಿರುತ್ತವೆ ಅವುಗಳನ್ನು ನೀವೇ ಸ್ಪಂದಿಸಿ ಸರಿಪಡಿಸಿಕೊಂಡರೆ ಸೂಕ್ತ ಎಂದರು.

ಹಳ್ಳಿಗಳಲ್ಲಿ ಮನೆ ನಿರ್ಮಾಣ ಮಾಡುವವರು 25 ರಿಂದ 30 ಅಡಿ ರಸ್ತೆಗೆ ಜಾಗ ಬಿಟ್ಟುಕೊಂಡು ಮನೆ ನಿರ್ಮಾಣ ಮಾಡಿದರೆ ಅನುಕೂಲ ಆಗುತ್ತದೆ ಎಂದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಶಿವಮೂರ್ತಿ, ಎಡಿಎಲ್ಆರ್ ಮಮತಾ, ತಗ್ಗಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭಾರತಿ , ಹಳುವಾಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸಿ.ಆರ್. ಕೃಷ್ಣ, ಉಪ ತಹಸಿಲ್ದಾರ್ ಡಿ. ತಮ್ಮಣ್ಣ ಗೌಡ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್, ತಗ್ಗಹಳ್ಳಿ ಕೃಷ್ಣ, ಕೆ.ಎಚ್. ನಾಗರಾಜು ಸೇರಿದಂತೆ ಮತ್ತಿತರರು ಹಾಜರಿದ್ದರು



ಸಕ್ಕರೆನಾಡು: ಮಂಡ್ಯದ ಕಲಾ ಮಂದಿರ ಆವರಣದಲ್ಲಿ ನಡೆದ ಕೆಎಸ್ ನರಸಿಂಹ ಸ್ವಾಮಿ ಟ್ರಸ್ಟ್ ನ ಸರ್ವಸದಸ್ಯರ ಸಭೆಯಲ್ಲಿ ಹಿರಿಯ ಸುಗಮಸಂಗೀತ ಕಲಾವಿದರಾದ ಶ್ರೀನಿವಾಸ ಉಡುಪ ಅವರ 75 ನೇ ಹುಟ್ಟು ಹಬ್ಬದ ಅಂಗವಾಗಿ ಸನ್ಮಾನಿಸಲಾಯಿತು.ಟ್ರಸ್ಟ್ ನ ಅಧ್ಯಕ್ಷ ಡಾ.ಕಿಕ್ಕೇರಿ ಕೃಷ್ಣಮೂರ್ತಿ, ಸದಸ್ಯ ಕಾರ್ಯದರ್ಶಿ ಡಾ.ಬಿವಿ ನಂದೀಶ್,ಸದಸ್ಯರಾದ ಡಾ.ಅಪ್ಪಗೆರೆ ತಿಮ್ಮರಾಜು,ಕಿಕ್ಕೇರಿ ಸುರೇಶ್, ಡಾ.ಮೇಖಲಾ ವೆಂಕಟೇಶ,ಕೆ ಎನ್ ಸುಬ್ರಹ್ಮಣ್ಯ,ಶ್ರೀವಳ್ಳಿ, ಕೆ ವಿ ಬಲರಾಮು, ಹಲಗೇಗೌಡರು, ಹಾಜರಿದ್ದರು ಚಿತ್ರ ಕೆ ವೇಣುಗೋಪಾಲ್ ಮಂಡ್ಯ.



ಸಕ್ಕರೆನಾಡು: ಬೌದ್ಧ ಮಹಾ ಸಮ್ಮೇಳನದಲ್ಲಿ ಮಾಜಿ ಸಚಿವ ವಿ.ಶ್ರೀನಿವಾಸಪ್ರಸಾದ್‌ರವರ ಧರ್ಮಪತಿ ಶ್ರೀಮತಿ ಭಾಗ್ಯಲಕ್ಷ್ಮಿ ಶ್ರೀನಿವಾಸಪ್ರಸಾದ್ರವರು, ಹಾಗೂ ಮಾಜಿ ಶಾಸಕರಾದ ಬಿ.ಹರ್ಷವರ್ಧನ್, ವಿ.ಶ್ರೀನಿವಾಸಪ್ರಸಾದ್ ಅಭಿಮಾನಿ ಬಳಗದ ಸಂಸ್ಥಾಪಕ ಅಧ್ಯಕ್ಷರಾದ ಎಂ.ರಾಜಕುಮಾರ್, ಆದಿಕರ್ನಾಟಕ ಮಹಾ ಸಂಸ್ಥೆಯ ಮಾಜಿ ಸಹ ಕಾರ್ಯದರ್ಶಿ ಸಿ.ರಾಘವೇಂದ್ರ, ಬಿಇಎಂಎಲ್ ಗೃಹ ನಿರ್ಮಾಣ ವೇದಿಕೆ ಅಧ್ಯಕ್ಷರಾದ ಬಾಬುರವರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

# ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸಿ ಸತ್ಪ್ರಜೆಗಳನ್ನಾಗಿ ಮಾಡಿ: ಎಸ್. ಸಚ್ಚಿದಾನಂದ



ಸಕ್ಕರೆನಾಡು: ಮಂಡ್ಯ: ಶ್ರಮಿಕ ವರ್ಗದ ಜನತೆ ಸರ್ಕಾರದ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸಿ ಸತ್ಪ್ರಜೆಗಳನ್ನಾಗಿ ಮಾಡುವ ಮೂಲಕ ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಬಿಜೆಪಿ ಮುಖಂಡ ಇಂಡುವಾಳು ಎಸ್. ಸಚ್ಚಿದಾನಂದ ಕಿವಿಮಾತು ಹೇಳಿದರು.

ಪ್ರಧಾನಿ ನರೇಂದ್ರಮೋದಿಯವರ 75ನೇ ಜನ್ಮದಿನಾಚರಣೆ ಅಂಗವಾಗಿ ಶ್ರೀರಂಗಪಟ್ಟಣ ತಾಲೂಕು, ಪಿ. ಹೊಸಹಳ್ಳಿ ಗ್ರಾಮದಲ್ಲಿರುವ ಶ್ರಮಿಕ ವರ್ಗದ ಕಟ್ಟಡ ಕಾರ್ಮಿಕರಿಗೆ ಬಟ್ಟೆ ವಿತರಿಸಿ ಮಾತನಾಡಿದರು.

ಶ್ರಮಿಕರ ಮಕ್ಕಳು ಕಟ್ಟಡ ಕಾರ್ಮಿಕರಾಗಿಯೇ ಬದುಕುವಂತಹ ಸ್ಥಿತಿ ನಿರ್ಮಾಣ ಮಾಡದೇ ಅವರಿಗೆ ವಿದ್ಯಾಭ್ಯಾಸ ಕೊಡಿಸಿ ಒಳ್ಳೆಯ ಹುದ್ದೆಗಳನ್ನು ಅಲಂಕರಿಸುವಂತೆ ಪೋಷಕರು ಮಾಡಬೇಕಿದೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರಮೋದಿಯವರು ಕಟ್ಟಡ ಕಾರ್ಮಿಕರು, ಶ್ರಮಿಕ ವರ್ಗದ ಜನರಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ವಿಶ್ವಕರ್ಮದಂತಹ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ ಕೊಡಿಸುವುದರ ಜೊತೆಗೆ ತಾವೂ ಸಹ ಆರ್ಥಿಕವಾಗಿ ಸ್ವಾವಲಂಬಿಗಳಾಗುವಂತೆ ಕರೆ ನೀಡಿದರು. ರಾಜ್ಯದಲ್ಲಿ ನಿರ್ಮಾಣ ಕಾರ್ಮಿಕರು, ಶ್ರಮಜೀವಿಗಳು ಹಾಗೂ ವಿವಿಧ ಕ್ಷೇತ್ರಗ`ಳಲ್ಲಿ ಕೆಲಸ ಮಾಡುವ ಕಾರ್ಮಿಕ ವರ್ಗ ದವರ ಜೀವನಮಟ್ಟವನ್ನು ಹೆಚ್ಚಿಸಲು ಸರ್ಕಾರ ಹಲವು ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸಿದೆ. ಕಾರ್ಮಿಕರ ಆರ್ಥಿಕ ಭದ್ರತೆ, ಆರೋಗ್ಯ, ಶಿಕ್ಷಣ ಮತ್ತು ಸಾಮಾಜಿಕ ಕಲ್ಯಾಣವನ್ನು ಉದ್ದೇಶಿಸಿ ರೂಪಿಸಲಾದ ಈ ಯೋಜನೆಗಳು ಅವರ ಕುಟುಂಬದ ಭವಿಷ್ಯಕ್ಕೂ ಬಲವಾದ ಬೆಂಬಲವಾಗುತ್ತವೆ. ಇಂತಹ ಯೋಜನೆಗಳನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು.

ಬಿಜೆಪಿ ಮುಖಂಡರಾದ ಪೈಲ್ವಾನ್ ಮಹದೇವು, ಪೈಲ್ವಾನ್ ಲಕ್ಷ್ಮಣ್, ಗ್ರಾ.ಪಂ. ಸದಸ್ಯರಾದ ಸಾಗರ್, ಕೃಷ್ಣಾನಂದ, ಮುಖಂಡರಾದ ಸ್ವಾಮಿ, ರಾಮು, ಜಗದೀಶ್, ನಾಗರಾಜು, ಸೋಮಣ್ಣ, ಪುಟ್ಟಣ್ಣ, ಕುಮಾರ, ಚೇತನ್, ಸುರೇಶ, ರಾಘವೇಂದ್ರ, ಶರತ್, ಶಶಿ, ಮೋಹನ್, ಕುಮಾರ್, ವೆಂಕಟೇಶ ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.

# ಸಾರ್ವಜನಿಕ ಪ್ರಕಟಣೆ

ಸಕ್ಕರೆನಾಡು: **ಮಂಡ್ಯ. :– ಮಂಡ್ಯ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದೆ. ಪಟಾಕಿ ತಯಾರಿಕೆ, ಮಾರಾಟ ಹಾಗೂ ಇತರೆ ಪ್ರಕ್ರಿಯೆಗಳು ಅಪಾಯಕಾರಿ ಉದ್ದಿಮಗಳಲ್ಲಿ ಬರುವುದರಿಂದ ಸದರಿ ಅಂಗಡಿಗಳಲ್ಲಿ ಯಾವುದೇ ಕಾರಣಕ್ಕೂ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳಬಾರದು.ತಪ್ಪಿದಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇದ ಮತ್ತು ನಿಯಂತ್ರಣ ) ಕಾಯ್ದೆ 1986 ತಿದ್ದುಪಡಿ 2016 ರ ಅನ್ವಯ ಕಾನೂನು ಕ್ರಮ ಜರಿಗಿಸಲಾಗುವುದು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ**

# ಅ.16 ರಂದು ಜಯಚಾಮರಾಜೇಂದ್ರ ಒಡೆಯರ್ ಮಾರುಕಟ್ಟೆ ಲೋಕಾರ್ಪಣೆ

ಸಕ್ಕರೆನಾಡು: ಮಂಡ್ಯ. : ಮಂಡ್ಯ ನಗರಸಭೆ ವತಿಯಿಂದ ಅಕ್ಟೋಬರ್ 16 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಹಳೇನಗರ, ಪೇಟೆ ಬೀದಿಯಲ್ಲಿ ನಿರ್ಮಿಸಲಾಗಿರುವ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಮಾರುಕಟ್ಟೆ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ .ಕುಮಾರಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ, ಕಾರ್ಯಕ್ರಮದ ಘನ ಉಪಸ್ಥಿತಿ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ವಹಿಸಲಿದ್ದಾರೆ.

ಕರ್ನಾಟಕ ಸರ್ಕಾರದ ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಕಾರ್ಯಕ್ರಮದ ಗೌರವ ಉಪಸ್ಥಿತಿಯನ್ನು ವಹಿಸಲಿದ್ದಾರೆ.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಂ.ಬಿ ರಮೇಶ್ ಬಂಡಿಸಿದ್ದೇಗೌಡ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಹಾಗೂ ಮಳವಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಎಂ ನರೇಂದ್ರಸ್ವಾಮಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ವಿಧಾನ ಪರಿಷತ್ ಶಾಸಕರಾದ ದಿನೇಶ್ ಗೂಳಿಗೌಡ ಅವರು ಕಾರ್ಯಕ್ರಮದ ಉಪಸ್ಥಿತಿ ವಹಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮಂಡ್ಯ ನಗರಸಭೆ ಅಧ್ಯಕ್ಷ ಎಂ ವಿ ಪ್ರಕಾಶ್ ಅವರು ಕಾರ್ಯಕ್ರಮದಲ್ಲಿ ಪ್ರಸ್ತಾವಿಕ ನುಡಿ ನುಡಿಯಲಿದ್ದಾರೆ.

ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ ಮಾದೇಗೌಡ, ಕೆ. ವಿವೇಕಾನಂದ, ಮೈ ಶುಗರ್ ಅಧ್ಯಕ್ಷ ಸಿ.ಡಿ ಗಂಗಾಧರ್, ಮಂಡ್ಯ ನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯೀಮ್, ಮಂಡ್ಯ ನಗರಸಭೆ ಉಪಾಧ್ಯಕ್ಷ ಎಂ ಪಿ ಅರುಣ್ ಕುಮಾರ್, ಮಂಡ್ಯ ನಗರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ರವಿ.ಟಿ ಅವರುಗಳು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮನೋಜ್ ಕುಮಾರ್ ಮೀನಾ, ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿಗಳಾದ ದೀಪಾ ಚೋಳನ್, ಬೆಂಗಳೂರು ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ಪ್ರಭುಲಿಂಗ ಕವಳಿಕಟ್ಟಿ, ಜಿಲ್ಲಾಧಿಕಾರಿ ಡಾ. ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ ಆರ್ ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾಧಿಕಾರಿ ಬಿಸಿ ಶಿವಾನಂದ ಮೂರ್ತಿ ಅವರು ವಿಶೇಷ ಆಹ್ವಾನಿತರಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# ಸೇವೆ ಸಲ್ಲಿಸಲು ಚುನಾಯಿತ ಪ್ರತಿನಿಧಿಗಳಿಗೆ ಸಹಕಾರ ಕ್ಷೇತ್ರ ಉತ್ತಮವಾಗಿದೆ: ಹರ್ಷಿತಾ

ಸಕ್ಕರೆನಾಡು: ಮಂಡ್ಯ : ಸಹಭಾಗಿತ್ವದಲ್ಲಿ ಸಾಮಾಜಿಕ ಸೇವೆಗಳನ್ನು ಸಲ್ಲಿಸಲು ಚುನಾಯಿತ ಪ್ರತಿ ನಿಧಿಗಳಿಗೆ ಸಹಕಾರ ಕ್ಷೇತ್ರ ಉತ್ತಮ ವಾಗಿದೆ ಎಂದು ನಬಾರ್ಡ್ ನ ಜಿಲ್ಲಾ ವ್ಯವಸ್ಥಾಪಕಿ ಹರ್ಷಿತಾ ತಿಳಿಸಿದರು.ನಬಾರ್ಡ್, ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ವತಿಯಿಂದ ತಾಲೂಕಿನ ಮಂಗಲ ಗ್ರಾಮದ ಕೃಷಿ ಪತ್ತಿನ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಸಹಕಾರ ವರ್ಷದ ನಿಮಿತ್ತ ನಡೆದ ಸಾವಯವ ಕೃಷಿಯ ಮಹತ್ವ ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿ ದರು.

ಜನರ ಸಹಭಾಗಿತ್ವದಲ್ಲಿ ಕೃಷಿ, ಅಭಿವೃದ್ಧಿ, ಶಿಕ್ಷಣ ಹೀಗೆ ಹಲವಾರು ವಿಷಯಗಳಲ್ಲಿ ಸಹಕಾರ ಕ್ಷೇತ್ರದಲ್ಲಿ ಗಣನೀಯ ಸೇವೆ ಮಾಡಬಹುದಾಗಿದೆ. ಭಾರತ್ ಸರ್ಕಾರ ಪ್ರತ್ಯೇಕ ಸಹಕಾರ ಸಚಿವಾಲಯವನ್ನು ಸ್ಥಾಪಿಸಿ ಸಹಕಾರ ಕ್ಷೇತ್ರಕ್ಕೆ ವಿಶೇಷವಾದ ಆಸಕ್ತಿಯನ್ನು ತಳೆದಿದೆ. ದೇಶದ ಪ್ರತಿಯೊಬ್ಬ ಪ್ರಜೆಯೂ ಸಹಕಾರಿ ಕ್ಷೇತ್ರದಲ್ಲಿ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.ಸಾಮಾಜಿಕ ಹೊಣೆಗಾರಿಕೆಯನ್ನು ಅರ್ಥೈಸಿಕೊಂಡು ಗ್ರಾಮದ ಅಭ್ಯುದಯಕ್ಕಾಗಿ ಸಹಕಾರ ಕ್ಷೇತ್ರಗಳ ಬಲವರ್ಧನೆಗಾಗಿ



ಪೂರಕ ಯೋಜನೆಗಳನ್ನು ಪ್ರಸಕ್ತ ಚುನಾಯಿತ ಸಹಕಾರಿಗಳು ಅಳವಡಿಸಿಕೊಳ್ಳಬೇಕಿದೆ ಎಂದು ಹೇಳಿದರು.ನಬಾರ್ಡ್ ನೇರವಾಗಿ ಜನರಿಗೆ ಸಹಾಯವನ್ನು ಮಾಡದಿದ್ದರೂ, ಸರ್ಕಾರ ಮತ್ತು ಸಹಕಾರ ಸಂಸ್ಥೆ ಹಾಗೂ ಸ್ವಯಂ ಸೇವಾ ಸಂಸ್ಥೆ ಮೂಲಕ ಸೇವೆ ಸಲ್ಲಿಸುತ್ತಿದೆ. ಭಾರತ ದೇಶದ ಶೇ. 60ರಷ್ಟು ಮಂದಿ ಸಹಕಾರಿ ಕ್ಷೇತ್ರದ ಭಾಗೀದಾರರಾಗಬೇಕಿದೆ ಎಂದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್ ಅಂತಾರಾಷ್ಟ್ರೀಯ ಸಹಕಾರ ವರ್ಷದ ಭಿತ್ತಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿ, ಕೃಷಿಯಲ್ಲಿ ಮೂಲವರ್ಧನೆ ಹೆಚ್ಚಾಗಬೇಕಿದೆ. ಸಹಕಾರ ಕ್ಷೇತ್ರದಲ್ಲಿ ನ್ಯಾಯಬೆಲೆ ಅಂಗಡಿಗಳು, ರಾಸಾನಿಯಕ ಗೊಬ್ಬರಗಳ ಮಾರಾಟ ಮತ್ತು ಈ ರೀತಿಯ ಗ್ರಾಹಕ ಮತ್ತು ರೈತನಿಗೆ ಉಪಯೋಗುವ ಸಹಕಾರಿ ಸಂಸ್ಥೆಗಳಾಗಿ ಕೆಲಸ ಮಾಡಿವೆ. ಸ್ವತಂತ್ರ್ಯ ಬಂದು 75 ವರ್ಷಗಳ ನಂತರ ಸಹಕಾರಿ ಕ್ಷೇತ್ರದ ಹಲವು ಕವಲುಗಳನ್ನು ಒಡೆದಿದ್ದು, ಅವಲೋಕನ ಮಾಡಿಕೊಳ್ಳಬೇಕಾದ ಅನಿವಾರ್ಯತೆ ಇದೆ ಎಂದು ಹೇಳಿದರು.

ಸಹಕಾರ ಕ್ಷೇತ್ರ ಮತ್ತು ಕಂಪನಿ ಕಾಯ್ದೆಗಳನ್ನು ರೈತರು ಗುಂಪುಗಳಾಗಿ ನೋಂದಾವಣೆಗೊಂಡು ಹೊಸ ಹೊಸ ಅನ್ವೇಷಣೆಗಳ ಮೂಲಕ ಕೃಷಿಯನ್ನು ಉದ್ಯಮವನ್ನಾಗಿಸಬೇಕು ಎಂದು ಸಲಹೆ ನೀಡಿದರು.

ಕೃಷಿ ಕ್ಷೇತ್ರ ಲಾಭದಾಯಕವಲ್ಲ ಎಂಬ ಕೀಳರಮೆ ರೈತರಲ್ಲಿದೆ. ವಿವಿಧ ಹಂತಗಳಲ್ಲಿ ಕೃಷಿ ಲಾಭದತ್ತ ಸಾಗುತ್ತಿದೆ. ಸಾವಯವ ಉತ್ಪನ್ನಗಳಲ್ಲಿ ಕಲಬೆರಕೆಯನ್ನು ತಡೆಯುವ ನಿಟ್ಟಿನಲ್ಲಿ ಹಲವು ಗುಂಪುಗಳನ್ನು, ತಜ್ಞರುಗಳನ್ನು ಸರ್ಕಾರ ನೇಮಕ ಮಾಡಿದೆ. ಗುಣಮಟ್ಟ ಪರೀಕ್ಷಿಸಲು ಸಾವಯವ ಕೃಷಿ ಪದ್ಧತಿಯು ಭವಿಷ್ಯದ ಮನುಕುಲ ಸಂರಕ್ಷಣೆಗೆ ಮಹತ್ವದ್ದಾಗಿದೆ ಎಂದರು.

ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಅಧ್ಯಕ್ಷ ಮಂಗಲ ಎಂ. ಯೋಗೀಶ್ ಮಾತನಾಡಿ, ವಿಶ್ವ ಸಂಸ್ಥೆಯು 2025ರ ವರ್ಷವನ್ನು ವಿಶ್ವ ಸಹಕಾರ ವರ್ಷ ಎಂದು ಘೋಷಣೆ ಮಾಡಿರುವುದು ಸಮಯೋಚಿತವಾಗಿದೆ. ಸಹಕಾರ ಕ್ಷೇತ್ರದಲ್ಲಿ ನಾಯಕತ್ವ ಬೆಳವಣಿಗೆ, ಸಾಮಾಜಿಕ ಜವಾಬ್ದಾರಿಗಳ ಹಂಚಿಕೆಗಳು ಹೆಚ್ಚಳವಾ ಗಿದೆ. ಗ್ರಾಮಗಳಲ್ಲಿ ಆದಾಯೋತ್ಪನ್ನ ಚಟುವಟಿಕೆಗಳಿಗೆ ಪೂರಕವಾಗುವ ಹಾಲು ಉತ್ಪಾದಕ. ಪ್ರಾಥಮಿಕ ಕೃಷಿ ಪತ್ತಿನ, ನೀರು ಬಳಕೆದಾರರ ಸಹಕಾರ ಸಂಘಗಳು, ಸ್ಥಳೀಯ ಸರ್ಕಾರವಾಗಿ ಕಾರ್ಯನಿರ್ವಹಿ ಸುತ್ತವೆ. ಸಂಘಗಳ ಬಲವರ್ಧನೆಗೆ ಗ್ರಾಮ ದಲ್ಲಿನ ಶೇ. 90ರಷ್ಟು ಮಂದಿ ಸದಸ್ಯರಾಗಿ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕಾಗಿದೆ ಎಂದರು.

ಸಹಾಯಕ ಕೃಷಿ ನಿರ್ದೇಶಕ ಹರ್ಷ, ಪ್ರಾಥಮಿಕ ಕೃಷಿ ಪತ್ತಿನ ಸಂಘದ ಅಧ್ಯಕ್ಷ ಮಂಜುನಾಥ್, ಕಾರ್ಯನಿರ್ವಾಹಕ ಅಧಿಕಾರಿ ಎಸ್.ಎಂ. ಶಂಕರೇಗೌಡ, ಸಂಪನ್ಮೂಲ ವ್ಯಕ್ತಿಗಳಾದ ಕೆ.ಪಿ.ಅರುಣಕುಮಾರಿ ಇತರರು ಉಪಸ್ಥಿತರಿದ್ದರು.

Printed by: Madangowda.M.K. Published by Chandrashekara Swamy.M., Owned by on behalf of Chandrashekara Swamy M. and Printed at Kaveri Offset Printers, #688, IInd Cross, Dasegowda Road, Swarnasandra, Mandya 571402 Karnataka State. Published at Hullamballi Village, Malavalli Taluk, Mandya Dist- 571463, Karnataka State. Editor : Chandrashekara Swamy M